# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 59 | SUNDAY 10-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ಯಡಿಯೂರಪ್ಪ ರಾಜಕೀಯ ಜೀವನಕ್ಕೆ 50 ವರ್ಷ ಪೂರ್ಣ: ಅಭಿಮಾನೋತ್ಸವ ಸಮಾರಂಭದಲ್ಲಿ ಅಮಿತ್ ಶಾ ಭಾಗಿ ಸಾಧ್ಯತೆ!



**ಬೆಳಗಾವಿ ವಾರ್ತೆ ಚಿತ್ರದುರ್ಗ:** ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ರಾಜಕೀಯ ಜೀವನದಲ್ಲಿ 50 ವರ್ಷ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ಶನಿವಾರ ಅಭಿಮಾನೋತ್ಸವ ಸಮಾರಂಭವನ್ನು ಆಯೋಜಿಸಲಾಗಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಲ್ಗೊಳ್ಳುವ ಸಾಧ್ಯತೆಯಿದೆ. ಸಮಾವೇಶದಲ್ಲಿ 83 ವರ್ಷದ ಯಡಿಯೂರಪ್ಪ ಅವರನ್ನು ಶಾ ಸನ್ಮಾನಿಸಲಿದ್ದು, ಸುಮಾರು ಹತ್ತು ಲಕ್ಷ ಜನರು ಸೇರುವ ನಿರೀಕ್ಷೆಯಿದೆ.

ದೊಡ್ಡ ಪ್ರಮಾಣದಲ್ಲಿ ಸಮಾವೇಶ ಆಯೋಜಿಸಲಾಗಿದ್ದು, ಪಕ್ಷದ ನಾಯಕರು, ಕೇಂದ್ರ ಸಚಿವರು, ಶಾಸಕರು ಹಾಗೂ ರಾಜ್ಯದಾದ್ಯಂತದ ವಿವಿಧ ಪ್ರಮುಖ ಮಠಗಳ ಮಠಾಧೀಶರು ಮತ್ತು ಸ್ವಾಮೀಜಿಗಳು ಸಹ ಭಾಗವಹಿಸಲಿದ್ದಾರೆ ಎಂದು ಪಕ್ಷದ ನಾಯಕರೊಬ್ಬರು ತಿಳಿಸಿದ್ದಾರೆ. ಸಮಾವೇಶದಲ್ಲಿ ಯಡಿಯೂರಪ್ಪ ಅವರ ಜೀವನ ಮತ್ತು ಹೋರಾಟಗಳಿಗೆ ಸಂಬಂಧಿಸಿದ ಎರಡು ಪುಸ್ತಕಗಳನ್ನು ಸಹ ಬಿಡುಗಡೆ ಮಾಡಲಾಗುತ್ತಿದೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಬಿವೈ ವಿಜಯೇಂದ್ರ, ಬಿಎಸ್ ಯಡಿಯೂರಪ್ಪ ಸಾರ್ವಜನಿಕ ಜೀವನದಲ್ಲಿ 50 ವರ್ಷ ಪೂರ್ಣಗೊಳಿಸಿದ್ದು, ದಣಿವರಿಯದ ಧೀಮಂತ ಜನನಾಯಕ, ರೈತ ಬಂಧು, ಆದರಣೀಯ ಬಿಎಸ್ ವೈ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಅಭಿಮಾನದ ಅಭಿನಂದನೆಗಳನ್ನು ಸಲ್ಲಿಸೋಣ ಎಂದು ಬರೆದುಕೊಂಡಿದ್ದಾರೆ. ಸಮಾವೇಶವನ್ನು ಅಮಿತ್ ಶಾ ಉದ್ಘಾಟಿಸಲಿದ್ದು, ಕೇಂದ್ರ ಸಚಿವರು, ಪಕ್ಷದ ಎಲ್ಲಾ ಮುಖಂಡರು ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯಡಿಯೂರಪ್ಪ, "ನಾಳೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವ ನಿರೀಕ್ಷೆಯಿದೆ. ಇಂದು ಕೂಡ ಒಂದು ಕಾರ್ಯಕ್ರಮವಿದೆ. ಜನರು ಈ ಕಾರ್ಯಕ್ರಮವನ್ನು ಬಹಳ ಪ್ರೀತಿ ಮತ್ತು ಪ್ರೀತಿಯಿಂದ ಆಯೋಜಿಸುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಪಕ್ಷವನ್ನು ಸಂಘಟಿಸಲು ದಿವಂಗತ ಅನಂತಕುಮಾರ್ ಮತ್ತಿತರ ಹಿರಿಯ ನಾಯಕರೊಂದಿಗೆ ತಾವು ಸೈಕಲ್‌ನಲ್ಲಿ ಪ್ರಯಾಣಿಸುತ್ತಿದ್ದುದನ್ನು ನೆನಪಿಸಿಕೊಂಡ ಅವರು, "ಇದು ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಕಾರಣವಾಯಿತು. ಈಗ ಮತ್ತೆ ಬದಲಾವಣೆಯ ಸಮಯ ಸಮೀಪಿಸುತ್ತಿದೆ. ಮುಂದಿನ ದಿನಗಳಲ್ಲಿ ಪಕ್ಷವನ್ನು ಮತ್ತಷ್ಟು ಬಲಪಡಿಸಲು ಪ್ರಯತ್ನಿಸಲಾಗುವುದು" ಎಂದು ಹೇಳಿದರು.

ಇದು ರಾಜ್ಯದಲ್ಲಿ ಬಿಜೆಪಿಯನ್ನು ಮತ್ತೆ ಅಧಿಕಾರಕ್ಕೆ ತರುವ ಪ್ರಯತ್ನಗಳ ಆರಂಭವೇ ಎಂದು ಕೇಳಿದಾಗ "ಕಾದು ನೋಡೋಣ" ಎಂದರು. ಸಮಾವೇಶಕ್ಕಾಗಿ ಮೆಗಾ ವೇದಿಕೆಗಳು, ಆಸನ ವ್ಯವಸ್ಥೆ ಮತ್ತು ಆಹಾರ ಮತ್ತು ಕುಡಿಯುವ ನೀರಿನ ಸೌಲಭ್ಯಗಳನ್ನು ಮಾಡಲಾಗಿದೆ.

ಸಮಾವೇಶವನ್ನು ಸುಗಮವಾಗಿ ನಡೆಸಲು ಮತ್ತು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಅಗತ್ಯ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಅವರು ತಿಳಿಸಿದರು.

## BYSರನ್ನು ಸಿಎಂ ಕುರ್ಚಿಯಿಂದ ಇಳಿಸಿದವರೇ ಗೌರವ ಸಮಾರಂಭ ನಡೆಸುತ್ತಿದ್ದಾರೆ; ಇದು ಅಭಿಮಾನೋತ್ಸವವಲ್ಲ– ರಾಜಕೀಯ ಗಿಮಿಕ್: ಸತೀಶ್ ಜಾರಕಿಹೊಳಿ

**ಬೆಳಗಾವಿ ವಾರ್ತೆ ಬೆಳಗಾವಿ:** ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷದ ರಾಜಕೀಯ ಪಯಣವನ್ನು ಸ್ಮರಿಸಲು ಬಿಜೆಪಿ ಆಯೋಜಿಸಿರುವ 'ಅಭಿಮಾನೋತ್ಸವ' ಕಾರ್ಯಕ್ರಮವನ್ನು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತೀವ್ರವಾಗಿ ಟೀಕಿಸಿದ್ದಾರೆ.

ಇದು ನಿಜವಾದ ಗೌರವ ಸಮಾರಂಭವಲ್ಲ, ರಾಜಕೀಯ ಲಾಭಕ್ಕಾಗಿ ಮಾಡುತ್ತಿರುವ "ರಾಜಕೀಯ ಗಿಮಿಕ್" ಎಂದು ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಡಿಯೂರಪ್ಪರನ್ನು ಬಿಜೆಪಿ ಒಳಗೇ ಮೂಲೆಗುಂಪು ಮಾಡಿದ ನಾಯಕರು ಈಗ ಅವರ ಹೆಸರಿನಲ್ಲಿ ದೊಡ್ಡ ಸಮಾರಂಭಗಳನ್ನು ನಡೆಸುತ್ತಿರುವುದು ರಾಜಕೀಯ ವ್ಯಂಗ್ಯ ಎಂದು ಹೇಳಿದರು.

"ಯಡಿಯೂರಪ್ಪರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದವರು, ಪಕ್ಷದೊಳಗೆ ಅವರಿಗೆ ಅವಮಾನ ಮಾಡಿದವರೇ ಇಂದು ಅವರ ಹೆಸರಿನಲ್ಲಿ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ. ಇದು ನಿಜವಾದ ಗೌರವವಲ್ಲ ಎಂದು ಟೀಕಿಸಿದರು.

ಯಡಿಯೂರಪ್ಪ ಅವರ ರಾಜಕೀಯ ಕೊಡುಗೆಯನ್ನು ಗೌರವಿಸುವ ಉದ್ದೇಶಕ್ಕಿಂತ ಚುನಾವಣಾ ಲಾಭ ಪಡೆಯುವ ರಾಜಕೀಯ ಲೆಕ್ಕಾಚಾರವೇ



ಈ ಕಾರ್ಯಕ್ರಮದ ಹಿಂದಿದೆ. "ಅವರನ್ನು ರಾಜಕೀಯವಾಗಿ ದುರ್ಬಲಗೊಳಿಸಿದವರೇ ಈಗ ಅಭಿಮಾನಿಗಳಂತೆ ವರ್ತಿಸುತ್ತಿದ್ದಾರೆ. ಇದು ಕೇವಲ ಚುನಾವಣಾ ಗಿಮಿಕ್ ಮಾತ್ರ. ರಾಜ್ಯದ ರಾಜಕೀಯದಲ್ಲಿ ಯಡಿಯೂರಪ್ಪ ಅವರಿಗೆ ವಿಶಿಷ್ಟ ಸ್ಥಾನವಿದೆ. ಆದರೆ, ಅವರ ಹೆಸರನ್ನು ಬಳಸಿಕೊಂಡು ಕೆಲವು ನಾಯಕರು ತಮ್ಮ ರಾಜಕೀಯ ಬಲ ಹೆಚ್ಚಿಸಿಕೊಳ್ಳಲು ಯತ್ನಿಸುತ್ತಿದ್ದಾರೆ ಎಂದು ತಿಳಿಸಲಿದರು.

### ನಾಯಕತ್ವ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ

ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಐದು ವರ್ಷ ಪೂರ್ಣಾವಧಿಗೆ ಅಧಿಕಾರದಲ್ಲಿರುತ್ತಾರೆ ಎಂಬ ಹೇಳಿಕೆಗೆ ಜಾರಕಿಹೊಳಿಯವರು ಬೆಂಬಲ ವ್ಯಕ್ತಪಡಿಸಿದರು.

ಸಿದ್ದರಾಮಯ್ಯರನ್ನು ಐದು ವರ್ಷಗಳ ಅವಧಿಗೆ ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಲಾಗಿದೆ. ಈ ವಿಚಾರದಲ್ಲಿ ಅನಗತ್ಯ ಚರ್ಚೆಗಳ ಅವಶ್ಯಕತೆ ಇಲ್ಲ ಎಂದು ಹೇಳಿದರು.

ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುವ ತೀರ್ಮಾನವೇ ಅಂತಿಮ. ನಾವು ಎಲ್ಲರೂ ಅದನ್ನು ಪಾಲಿಸಲು ಬದ್ಧರಾಗಿದ್ದೇವೆ," ಎಂದು ತಿಳಿಸಿದರು.

## ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಅಂತರ ವಲಯ ಪುರುಷರ ಕಬಡ್ಡಿ ಟೂರ್ನಿ
## ಕಬಡ್ಡಿ ಮಣ್ಣಿನೊಂದಿಗೆ ಬೆರೆಯುವ ಆಟ : ಬಾಲಶೇಖರ ಬಂದಿ



ಮೂಡಲಗಿ: ಶಿಕ್ಷಣ ಸಂಸ್ಥೆಯ ದೈಹಿಕ ಶಿಕ್ಷಣ ಮಹಾವಿದ್ಯಾಲಯ ಹಾಗೂ ಕಲಾ ವಾಣಿಜ್ಯ ಮತ್ತು ಬಿಸಿಎ ಮಹಾ ವಿದ್ಯಾಲಯಗಳ ಆತಿಥ್ಯದಲ್ಲಿ ಎರಡು ದಿನಗಳ ಕಾಲ ಜರುಗಿದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಅಂತರ ವಲಯ ಪುರುಷರ ಕಬಡ್ಡಿ ಟೂರ್ನಿಯಲ್ಲಿ ಚಾಂಪಿಯನ್‌ಶಿಪ್ ಪಡೆದುಕೊಂಡ ಮೂಡಲಗಿ ಬಿಪಿಎಡ್ ತಂಡ ಮತ್ತು ರನ್ನರ್ ಆಪ್ ಪಡೆದ ಮೂಡಲಗಿಯ ಎಂ ಪಿ ಇಡಿ ಕಾಲೇಜು ತಂಡಕ್ಕೆ ಬಹುಮಾನ ವಿತರಿಸಲಾಯಿತು.

**ಬೆಳಗಾವಿ ವಾರ್ತೆ ಮೂಡಲಗಿ :** ಅಪ್ಪಟ ದೇಶಿ ಕ್ರೀಡೆಯಾದ ಕಬಡ್ಡಿ ಮಣ್ಣಿನೊಂದಿಗೆ ಬೇರೆತು ಆಡುವ ಆಟ. ಆಟದ ಸೊಗಡು, ವೈಶಿಷ್ಟ್ಯ, ಚಾಕು ಚಕ್ಕತೆ ನೋಡುಗರನ್ನು ರೋಮಾಂಚನಗೊಳಿಸುತ್ತದೆ ಎಂದು ಹಿರಿಯ ನಿವೃತ್ತ ಗ್ರಂಥಪಾಲಕ ಹಾಗೂ ಪತ್ರಕರ್ತ ಬಾಲಶೇಖರ ಬಂದಿ ಅಭಿಪ್ರಾಯ ಪಟ್ಟರು.

ಅವರು ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ದೈಹಿಕ ಶಿಕ್ಷಣ ಮಹಾವಿದ್ಯಾಲಯ ಹಾಗೂ ಕಲಾ ವಾಣಿಜ್ಯ ಮತ್ತು ಬಿಸಿಎ ಮಹಾವಿದ್ಯಾಲಯದ ಮೈದಾನದಲ್ಲಿ ಮುಕ್ತಾಯವಾದ ಬೆಳಗಾವಿ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ 3 ನೇ ವಲಯ ಹಾಗೂ ಅಂತರ್ ವಲಯ ಪುರುಷರ ಕಬಡ್ಡಿ ಪಂದ್ಯಾವಳಿಯಲ್ಲಿ ಬಹುಮಾನ ವಿತರಣೆ ಸಮಾರಂಭದ ಮುಖ್ಯ ಅತಿಥಿಗಳಾಗಿ ಚಾಂಪಿಯನ್ ತಂಡಗಳಿಗೆ ಪಾರಿತೋಷಕಗಳನ್ನು ವಿತರಿಸಿ ಮಾತನಾಡಿ, ಭಾರತದ ದೇಶಿಯ ಆಟಗಳಾದ ಕಬಡ್ಡಿ, ಖೋಖೋ ಕುಸ್ತಿ ಆಟಗಾರರಲ್ಲಿ ಹೋರಾಟದ ಮನೋಭಾವದ ಜೊತೆಗೇ ಸಹೋದರತೆ, ಸೌಹಾರ್ದತೆ, ಪ್ರೀತಿ ಬಾಂಧವ್ಯಗಳನ್ನು ಬೆಳೆಸುತ್ತವೆ ಎಂದು ಬಾಲಶೇಖರ ಅಭಿಪ್ರಾಯ ಪಟ್ಟರು.

ಮೂಡಲಗಿ ಶಿಕ್ಷಣ ಸಂಸ್ಥೆಯ ಚೇರಮನ್ ವೆಂಕಟೇಶ ಸೋನವಾಲಕರ ಮಾತನಾಡಿ, ಆಟಗಾರರು ಸೋಲು ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಬೇಕೆಂದು ಹೇಳಿದ ಅವರು ನಮ್ಮ ಶಿಕ್ಷಣ ಸಂಸ್ಥೆಯಿಂದ ಮುಂಬರುವ ದಿನಗಳಲ್ಲಿ ಹೆಚ್ಚು ಹೆಚ್ಚು ಕ್ರೀಡೆಗಳನ್ನು ಸಂಘಟಿಸಿ ಆಟಗಳನ್ನು ಹಾಗೂ ಆಟಗಾರರನ್ನು ಪ್ರೋತ್ಸಾಹಿಸುವುದಾಗಿ ಹೇಳಿದರು.

ಬಹುಮಾನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿದ ಮೂಡಲಗಿ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಆರ್ ಪಿ ಸೋನವಾಲ್ಕರ್ ಚಾಂಪಿಯನ್ ತಂಡಗಳಿಗೆ ಪಾರಿತೋಷಕಗಳನ್ನು ವಿತರಿಸಿದರು.

ಸಮಾರಂಭದಲ್ಲಿ ಮಲೀಕ್ ಸಾಬ್ ಪಾಶ್ಚಾಪುರ್, ಲಕ್ಷ್ಮಣ ಅಡಿಹುಡಿ, ಸಂಗಪ್ಪ ಸೂ ಟರಣ್ಣವರ್, ಕಾಲೇಜ್ ಆಡಳಿತಾಧಿಕಾರಿ ಡಾ ಎಸ್ಎಲ್ ಚಿತ್ರಗಾರ, ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ ಎಂ ಕೆ ಕಂಕನವಾಡಿ, ಡಾ ಎಲ್ ಬಿ ಮಣ್ಣಾಪುರ, ಪವನ ಕುಮಾರ ಕೆ, ಸಂತೋಷ ಮುಗಳಿ, ಶಿವಾಜಿ ಮಾಲೋಜಿ, ಎಸ್ ಎಮ್ ಹಳ್ಳೂರ ಎ ಎಸ್ ಮಿಶಿ ನಾಯಿಕ ಮುಂತಾದವರು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಡಾ ಎಸ್ಎಲ್ ಚಿತ್ರಗಾರ ಸ್ವಾಗತಿಸಿದರು. ಪ್ರಕಾಶ ಚೌಡಕಿ, ಬಿ ಕೆ ಬಡಗನ್ನವರ, ಎ ಎಸ್ ಮಿಶಿ ನಾಯಿಕ ನಿರೂಪಿಸಿದರು, ಬಿ ಎಸ್ ಕಂಬಾರ ವಂದಿಸಿದರು.

**ಮೂಡಲಗಿ ಬಿಪಿಎಡ್ ಕಾಲೇಜ್ ಚಾಂಪಿಯನ್:** ಮೂಡಲಗಿ: ಮೂಡಲಗಿ ಶಿಕ್ಷಣ ಸಂಸ್ಥೆಯ ದೈಹಿಕ ಶಿಕ್ಷಣ ಮಹಾವಿದ್ಯಾಲಯ ಹಾಗೂ ಕಲಾ ವಾಣಿಜ್ಯ ಮತ್ತು ಬಿಸಿಎ ಮಹಾ ವಿದ್ಯಾಲಯಗಳ ಆತಿಥ್ಯದಲ್ಲಿ ಎರಡು ದಿನಗಳ ಕಾಲ ಜರುಗಿದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಅಂತರ ವಲಯ ಪುರುಷರ ಕಬಡ್ಡಿ ಟೂರ್ನಿಯಲ್ಲಿ ಮೂಡ ಲಗಿ ಬಿಪಿಎಡ್ ಕಾಲೇಜ್ ಚಾಂಪಿಯನ್ ಶಿಪ್ ಪಡೆದುಕೊಂಡಿತು ಮೂಡಲಗಿಯ ಎಂ ಪಿ ಇಡಿ ಕಾಲೇಜು ತಂಡ ರನ್ನರ್ ಆಪ್ ಆಯಿತು. ಅಂತಿಮ ಪಂದ್ಯದಲ್ಲಿ ಬಿ ಪಿ ಇಡಿ ಕಾಲೇಜ್ ತಂಡ ಮೂಡಲಗಿ ಎಂ ಪಿ ಇಡಿ ಕಾಲೇಜನ್ನು 20–18 ಅಂಕಗಳ ಅಂತರದಲ್ಲಿ ಪರಾಭವಗೊಳಿಸಿತು. ಇದಕ್ಕೂ ಪೂರ್ವದಲ್ಲಿ ಸೌದತ್ತಿ ಎಸ್‌ವಿಎಸ್‌ಬಿ ಕಾಲೇಜ್ ತಂಡ ವಿಜಯಪುರದ ಸರ್ಕಾರಿ ಪದವಿ ಕಾಲೇಜ್ ತಂಡವನ್ನು 26–6 ಅಂಕಗಳ ಅಂತರದಲ್ಲಿ ಪರಾಭವಗೊಳಿಸಿ ತೃತೀಯ ಸ್ಥಾನವನ್ನು ಪಡೆದಿಕೊಂಡಿತು. ಸೌದತ್ತಿ ಎಸ್‌ವಿಎಸ್‌ಬಿ ಕಾಲೇಜ್ ತಂಡದ ಹನುಮಂತ ಬಜೇರಿ ಉತ್ತಮ ದಾಳಿಗಾರ, ಮೂಡಲಗಿ ಬಿಪಿಎಡ್ ಕಾಲೇಜಿನ ಮಹೇಶ್ ಕೆಮ್ಮನ್ನಕೋಳ ಉತ್ತಮ ಹಿಡಿತಗಾರ ಹಾಗೂ ಎಂಪಿಎಡ್ ಕಾಲೇಜಿನ ಮಲ್ಲು ಸುಳ್ಳನ್ನವರ ಸರ್ವೋತ್ತಮ ಆಟಗಾರ ಪ್ರಶಸ್ತಿಗೆ ಭಾಜನರಾಗಿ ಟ್ರೋಫಿಗಳನ್ನು ಪಡೆದಿಕೊಂಡರು.

## ಗೋಕಾಕದಲ್ಲಿ ಇಂದು "ಸಂದಿಮನಿ ಸಂಗವ್ವ" ನಾಟಕ ಪ್ರದರ್ಶನ




**ಬೆಳಗಾವಿ ವಾರ್ತೆ ಗೋಕಾಕ:** ಗೋಕಾವಿ ಭಾಗದ ರಂಗಕಲಾ ಆಸಕ್ತರ ಕೋರಿಕೆಯ ಮೇರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ಪ್ರಖ್ಯಾತ ರಂಗ ಕಲಾವಿದರಾದ ದಯಾನಂದ ಬಿಳಗಿ ಹಾಗೂ ಸ್ವೇತಾ ಬಿಳಗಿ ಅವರ ಪ್ರಮುಖ ಪಾತ್ರದ ನೇತೃತ್ವದಲ್ಲಿ "ಸಂದಿಮನಿ ಸಂಗವ್ವ" ನಾಟಕ ಪ್ರದರ್ಶನವು ದಿನಾಂಕ 10 ರಂದು ( ಒಂದು ದಿನ ಮಾತ್ರ) ಗೋಕಾಕ ನಗರದ ಚಿತ್ರಾ ಟಾಕೀಸ್ ಸಭಾಭವನದಲ್ಲಿ ಮದ್ಯಾಹ್ನ 4–45 ಕ್ಕೆ ಮತ್ತು ಸಂಜೆ 6–15 ಕ್ಕೆ ಎರಡು ಆಟಗಳು ಪ್ರದರ್ಶನ ನಡೆಯಲಿವೆ. ಮದ್ಯಾಹ್ನ 2 ಗಂಟೆಗೆ ನಾಟಕದ ಉದ್ಘಾಟನಾ ಸಮಾರಂಭದಲ್ಲಿ ಶಾಸಕ ರಮೇಶ್ ಜಾರಕಿಹೊಳಿ, ಎಂಎಲ್ಸಿ ಲಖನ ಜಾರಕಿಹೊಳಿ, ಶಾಸಕರ ಆಪ್ತ ಸಹಾಯಕ ಸುರೇಶ ಸನದಿ, ಗಣ್ಯರಾದ ಟಿ.ಆರ್.ಕಾಗಲ್, ನಗರಸಭೆ ಪೌರಾಯುಕ್ತ ರವಿ ರಣಸುಭೆ, ಅರಣ್ಯ ಅಧಿಕಾರಿ ಆನಂದ ಹೆಗಡೆ, ಹಿಂದುಳಿದ ವರ್ಗಗಳ ತಾಲೂಕ ಕಲ್ಯಾಣ ಅಧಿಕಾರಿಗಳಾದ ಶ್ರೀಮತಿ ಪ್ರಮೀಳಾ ಬೇವಿನಗಿಡದ ,ಉಪ ತಹಶಿಲ್ದಾರ ರವಿ ಚೌಡಾಪೂರ ಸೇರಿದಂತೆ ಅನೇಕ ಗಣ್ಯಮಾನ್ಯರ ಉಪಸ್ಥಿತಿಯಲ್ಲಿ "ಸಂದಿಮನಿ ಸಂಗವ್ವ" ನಾಟಕವು ಉದ್ಘಾಟನೆಗೊಳ್ಳಲಿದೆ.

ಗೋಕಾಕ ತಾಲೂಕಿನ ಸುತ್ತಮುತ್ತಲಿನ ಗ್ರಾಮಸ್ಥರು ಆಗಮಿಸಿ ಬಡ ರಂಗ ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ಶ್ರೀ ಪಂಚಲಿಂಗೇಶ್ವರ ನಾಟ್ಯ ಸಂಘದ ಅಧ್ಯಕ್ಷರು ಹಿರಿಯ ಕಲಾವಿದ ಹನುಮಂತಪ್ಪ ಬಾಗಲಕೋಟ ಇವರು ಸಾರ್ವಜನಿಕರಲ್ಲಿ ಕೋರಿದ್ದಾರೆ.

## ತಂದೆ ತಾಯಿಗಳ ತ್ಯಾಗಕ್ಕೆ ತಕ್ಕ ಪ್ರತಿಫಲ ದೊರಕಿಸಿಕೊಡುವ ಬಹುದೊಡ್ಡ ಜವಾಬ್ದಾರಿ ವಿದ್ಯಾರ್ಥಿಗಳ ಮೇಲಿದೆ

**ಬೆಳಗಾವಿ ವಾರ್ತೆ ಗೋಕಾಕ:** ತಂದೆ ತಾಯಿಗಳ ತ್ಯಾಗಕ್ಕೆ ತಕ್ಕ ಪ್ರತಿಫಲ ದೊರಕಿಸಿಕೊಡುವ ಬಹುದೊಡ್ಡ ಜವಾಬ್ದಾರಿ ವಿದ್ಯಾರ್ಥಿಗಳ ಮೇಲಿದೆ ಎಂದು ಕಾರಾಗೃಹದ ಜೈಲರ ಸುಷ್ಮಾ ಒಡಗೇರಿ ಹೇಳಿದರು.

ಗುರುವಾರದಂದು ನಗರದ ಶ್ರೀ ಸಿದ್ದಲಿಂಗೇಶ್ವರ ಬಿ.ಸಿ.ಎ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಬಿ.ಸಿ.ಎ ಅಂತಿಮ ವರ್ಷದ ವಿದ್ಯಾರ್ಥಿಗಳ ಬಿಳ್ಕೋಡುಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರ ಪಡೆದು ಒಳ್ಳೆಯ ನಾಗರಿಕರಾಗಬೇಕು. ಇಂದಿನ ಸ್ವರ್ಧಾತ್ಮಕ ಯುಗದಲ್ಲಿ ಪ್ರತಿಭಾವಂತರಿಗೆ ಹೆಚ್ಚಿನ ಅವಕಾಶ ಇದ್ದು, ತಾವು ಪ್ರತಿಭಾವಂತರಾಗಿ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಆಡಳಿತಾಧಿಕಾರಿ ಅಡಿವೇಶ ಗವಿಮಠ, ಅರ್ಪನಾ ಕುಲಕರ್ಣಿ, ಅರ್ಬನ್ ಬ್ಯಾಂಕ್ ನಿರ್ದೇಶಕ ಮಹಾಂತೇಶ ಕಲ್ಲೋಳಿ, ಪ್ರವಿತ್ರಾ ಡಿಸೋಜಾ




ಗೋಕಾಕ: ಸಮಾರಂಭವನ್ನು ಉದ್ಘಾಟಿಸುತ್ತಿರುವ ಗಣ್ಯರು.

ಉಪಸ್ಥಿತರಿದ್ದರು.

## ರಾಜ್ಯಮಟ್ಟದ ತತ್ವಪದ ವಿಮರ್ಶಾ ಲೇಖನ ಸ್ಪರ್ಧೆ

**ಬೆಳಗಾವಿ ವಾರ್ತೆ ಧಾರವಾಡ:** ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ರಾಜ್ಯಮಟ್ಟದ ತತ್ವಪದ ವಿಮರ್ಶಾ ಲೇಖನ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

18 ರಿಂದ 40 ವರ್ಷ ವಯೋಮಿತಿಯುಳ್ಳವರು ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಮತ್ತು ಸ್ಪರ್ಧೆಗೆ ಅಧ್ಯಯನ ಕೇಂದ್ರವು ನೀಡಿರುವ ವಿಷಯಗಳಲ್ಲಿ ಯಾವುದಾದರು ಒಂದು ವಿಷಯವನ್ನು ಆಯ್ಕೆ ಮಾಡಿ ವಿಮರ್ಶಾ ಲೇಖನವನ್ನು ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು–560056 ವಿಳಾಸಕ್ಕೆ ಜೂನ್ 05, 2026 ರೊಳಗಾಗಿ ಅಂಚೆ, ಕೊರಿಯರ್, ಇಮೇಲ್ ಅಥವಾ ಖುದ್ದಾಗಿ ಸಲ್ಲಿಸಬಹುದು.

ಅರ್ಜಿ ನಮೂನೆಯನ್ನು ವೆಬ್‌ಸೈಟ್ https:// kanakadasaresearchcenter.karnataka.gov.in/ ನಲ್ಲಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:9743545865 ಗೆ ಸಂಪರ್ಕಿಸಬಹುದು ಎಂದು ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶುದ್ಧ ನೀರು ಪೂರೈಕೆಗೆ ಸೂಚನೆ




**ಬೆಳಗಾವಿ ವಾರ್ತೆ ನವಲಗುಂದ:** ಗ್ರಾಮೀಣ ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ಯಾವುದೇ ವ್ಯತ್ಯಯವಾಗದಂತೆ ಹಾಗೂ ಶುದ್ಧ ನೀರು ಪೂರೈಕೆಯಾಗುವಂತೆ ನೋಡಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಧಾರವಾಡ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಜಿಲ್ಲಾ ಪಂಚಾಯಿತಿ ಭುವನೇಶ ಪಾಟೀಲ ನಿರ್ದೇಶನ ನೀಡಿದರು. ಕುಡಿಯುವ ನೀರು, ಮನರೇಗಾ ಕರ ವಸೂಲಾತಿ, ಸಾಮಾಜಿಕ ಲೆಕ್ಕ ಪರಿಶೋಧನೆ ವಸೂಲಾತಿ ಹಾಗೂ ವಿವಿಧ ಯೋಜನೆಗಳ ಕಾಮಗಾರಿ ಅಪೇಕ್ಷಣಾ ವಸೂಲಾತಿ ಪ್ರಗತಿ ಪರಶೀಲನಾ ಸಭೆಯಲ್ಲಿ ಮಾತನಾಡಿದ ಅವರು ಶುದ್ಧ ನೀರು ಪೂರೈಕೆಯಾಗುತ್ತಿರುವ ಕುರಿತು ಖಚಿತ ಪಡಿಸಿಕೊಳ್ಳಿ ಈ ನಿಟ್ಟಿನಲ್ಲಿ ಸಂಬಂಧಪಟ್ಟ ಗ್ರಾಮ ಪಂಚಾಯಯಿತಿಗಳು ಸಾಕಷ್ಟು ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕು. ಅಲ್ಲದೇ ಮನರೇಗಾ ಯೋಜನೆಗಳಲ್ಲಿ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾ ಪಂ ಕಾರ್ಯನಿರ್ವಾಹಕ ಅಧಿಕಾರಿ ರವೀಂದ್ರ ಪಾಟೀಲ, ತಾ.ಪಂ.ಸಹಾಯಕ ನಿರ್ದೇಶಕ ಜಗದೀಶ ಹಡಪದ (ಗ್ರಾ, ಉ.) ಸಿದ್ದು ಐರಾಣಿ, ಗುರುನಾಥ ಜೋಗಿ, ಆನಂದ ನಾವಳ್ಳಿ ಸೇರಿ ನವಲಗುಂದ-ಅಣ್ಣಿಗೇರಿ ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

# ತಾಂತ್ರಿಕ ತೊಂದರೆ: ಕೆಲಸವಿಲ್ಲದೆ ವಾಪಸಾದ ಕಾರ್ಮಿಕರು

**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಸುರಣಗಿ ಗ್ರಾಮ ಪಂಚಾಯಿತಿಯಲ್ಲಿ ವಿಬಿಜಿ ರಾಮ್ ಜಿ (ನರೇಗಾ) ಕಾಮಗಾರಿ ಸಂಬಂಧ ತಾಂತ್ರಿಕ ತೊಂದರೆಯಿಂದಾಗಿ ಕೆಲಸಕ್ಕೆ ತೆರಳಿದ್ದ ನೂರಾರು ಕಾರ್ಮಿಕರು ಕೆಲಸದಿಂದ ವಂಚಿತರಾಗಿ ಮರಳಿ ಬಂದ ಘಟನೆ ಜರುಗಿದೆ.

ಘಟನೆ ವಿವರಃ ಸುರಣಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಬ್ ಕಾರ್ಡ್ ಹೊಂದಿರುವ ನೂರಾರು ಕಾರ್ಮಿಕರು ಕೆಲಸಕ್ಕೆ ತೆರಳಿದ್ದರು ಆದರೆ ಈಗಿನ ನಿಯಮಾವಳಿಯಂತೆ ತಂತ್ರಾಂಶದ ಮೂಲಕ ಮುಖ ಚರ್ಯೆ ತೆಗೆದುಕೊಳ್ಳುವ ಸಂದರ್ಭದಲ್ಲಿ ಮಿಸ್ ಮ್ಯಾಚ್ ಎಂದು ಬರುತ್ತಿದ್ದಂತೆ ಕೂಲಿ ಕಾರ್ಮಿಕರ ಸಹನೆಯ ಕಟ್ಟೆ ಒಡೆಯಿತು.

ಕೆಲಸಕ್ಕೆ ಬಂದಿದ್ದ ನೂರಾರು ಕಾರ್ಮಿಕರಲ್ಲಿ ಕೆಲವರಿಗೆ ಕೆಲಸ ಸಿಕ್ಕರೆ ಇನ್ನು ಕೆಲವರಿಗೆ ಸಿಗಲಿಲ್ಲ ಇದರಿಂದ ರೋಸಿ ಹೋದ ಮಹಿಳಾ ಕೂಲಿ ಕಾಮಿರ್ಕರು ಎಲ್ಲವನ್ನು ಸರಿಪಡಿಸಿಕೊಂಡು ಕೆಲಸವನ್ನು ಆರಂಭಿಸಿ ಒಬ್ಬರಿಗೆ ಕೆಲಸ ಕೊಟ್ಟು ಇನ್ನೊಬ್ಬರಿಗೆ ಕೊಡುವುದಿಲ್ಲ ಎಂದರೆ ಇದು ಯಾವ ನ್ಯಾಯ ಎಲ್ಲವನ್ನು ಸ್ಥಗಿತಗೊಳಿಸಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು ಆಗ ಪಂಚಾಯತಿ ಸಿಬ್ಬಂದಿ ತಾಂತ್ರಿಕ ದೋಷವನ್ನು ಸರಿಪಡಿಸಿ ಕೊಂಡು ಕೆಲಸ ಆರಂಭಿಸುವುದಾಗಿ ಹೇಳಿದ ನಂತರ ಬಂದ ದಾರಿಗೆ ಸುಂಕವಿ ಲ್ಲ ಎಂಬಂತೆ ಕೂಲಿ ರಹಿತರಾಗಿ ಮರಳಿದರು. ಈ ಕುರಿತು ಪಿಡಿಒ ಗೌರಮ್ಮ ರೋಣ ದ ಪ್ರತಿಕ್ರಿಯೆ ನೀಡಿ ಕೃಷಿಕೂಲಿ ಕಾರ್ಮಿಕರ ಇ_ ಕೆವೈಸಿ ಸಮರ್ಪಕವಾಗಿದ್ದು ಇದನ್ನು ಗ್ರಾಮ ಪಂಚಾಯಿತಿಯಲ್ಲಿ ಸರಿಪಡಿಸಲಾ ಗಿದೆ ಆದರೆ ಈಗ ಹೊಸ ತಂತ್ರಾಂಶವನ್ನು ಬಳಸುತ್ತಿರುವುದರಿಂದ



ದೋಷ ಕಂಡು ಬಂದಿದ್ದು ಅದನ್ನು ಸರಿಪಡಿಸಿ ಕೆಲಸ ಆರಂಭಿಸುವುದಾಗಿ ಹೇಳಿದ್ದಾರೆ. ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಪ್ರವೀಣ್ ಸುರಣಗಿ ಕಳೆದ ವರ್ಷವೂ ಮಳೆಗಾಲದ ಮುಂದೆ ಕೆಲಸ ಆರಂಭಿಸಿ 20 ದಿನ ಕೆಲಸ ನಿರ್ವಹಿಸಿದ 'ವರಿಗೆ ಕೇವಲ 4 ದಿನಗಳ ಕೂಲಿ ನೀಡಿ ತಾಂತ್ರಿಕ ದೋಷದಿಂದಾಗಿ ಸಾಧ್ಯವಾಗುತ್ತಿಲ್ಲ ಎಂ ದು ಹೇಳಲಾಯಿತು. ಈಗ ಕೃಷಿಕೂಲಿ ಕಾರ್ಮಿಕರು ಸಮರ್ಪಕವಾಗಿ ಕೆಲಸ ನಿರ್ವಹಿಸಲು ತಂತ್ರಾಂಶ ಅಡ್ಡ ಬಂದಿರು ವುದರಿಂದ ಹಿರಿಯ ಅಧಿಕಾರಿಗಳು ಕೂಡ ಲೇ ಸರಿಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಅಂತರಾಷ್ಟ್ರೀಯ ರೆಡ್‌ಕ್ರಾಸ್ ದಿನಾಚರಣೆ




**ಬೆಳಗಾವಿ ವಾರ್ತೆ ನವಲಗುಂದ:** ಇಂದಿನ ಒತ್ತಡದ ದಿನಮಾನಗಳಲ್ಲಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವದೇ ಸವಾಲಿನ ಕೆಲಸವಾಗಿದೆ ಹಾಗೂ ನೈರ್ಮಲೀಕರಣ ಉತ್ತಮ ಆರೋಗ್ಯದ ಅಡಿಪಾಯವಾಗಿದೆ ವಿದ್ಯಾರ್ಥಿಗಳು ದೈಹಿಕ ಶ್ರಮ ವಹಿಸಿ ಉತ್ತಮ ಆರೋಗ್ಯವನ್ನು ಹೊಂದಬೇಕು ಎಂದು ಅಳಗವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ ಅವಿನಾಶ ಎಸ್ ಜಿ ಹೇಳಿದರು.

ಸ್ಥಳೀಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಭಾರತೀಯ ರೆಡ್ ಕ್ರಾಸ್ ಘಟಕ, ಆಂತರಿಕ ಭರವಸೆ ಗುಣಮಟ್ಟ ಕೋಶ ಹಾಗೂ ತಾಲೂಕ ಆಸ್ಪತ್ರೆ ನವಲಗುಂದ ಇವುಗಳ ಸಹಯೋಗದಲ್ಲಿ ಅಂತರಾಷ್ಟ್ರೀಯ ರೆಡ್ ಕ್ರಾಸ್ ದಿನಾಚರಣೆ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಎಂ.ಬಿ. ಬಾಗಡಿ ಮಾತನಾಡಿ ಇತ್ತೀಚಿನ ದಿನಗಳಲ್ಲಿ ವಿಶೇಷವಾಗಿ ಯುವಕರು ದುಶ್ಚಟಗಳಿಗೆ ಮಾರುಹೋಗಿ ತಮ್ಮ ಆರೋಗ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ ಹಾಗೂ ವೈಯಕ್ತಿಕ ಶುಚಿತ್ವದತ್ತ ಗಮನ ಹರಿಸುತ್ತಿಲ್ಲ. ಅತಿ ಚಿಕ್ಕ ವಯಸ್ಸಿನಲ್ಲಿ ಹೃದಯಾ ಘಾತದಂತಹ ಮಾರಕ ಕಾಯಿಲೆಗಳಿಗೆ ಬಲಿ ಆಗುತ್ತಿದ್ದಾರೆ. ಹೀಗಾಗಿ ಯುವ ಜನತೆ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ದೀರ್ಘಾಯುಷ್ಯವಂತರಾಗಿ ಜೀವನ ನಡೆಸಲು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಪ್ರೊ ಸಾತಿಹಾಳ ಆಯ್ ಬಿ, ನಾಗರತ್ನ ಕುರಡೇಕರ್, ಬಿ ವಿ ಏಣಗಿ, ಶ್ರೀಧರ ಲೋನಕರ, ಗಣೇಶ್ ಧೋಂಗಡಿ, ಗಂಗಾಧರ ಗೌಡರ, ಚೈತ್ರಾ ಟಿ, ಪ್ರತಿಭಾ ನಿಡಗುಂದಿ, ಸಮೀರ ನಧಾಪ, ವೈ ಎನ್ ಗುಳುಗಂದಿ, ಡಾ ಪ್ರವೀಣ ದೊಡಮನಿ, ಸುಜಾತಾ ಬರದೂರ್, ಚೈತ್ರಾ ಪಾಟೀಲ, ಮಲ್ಲಿಕಾರ್ಜುನ ಗಡಾದ,ಜ್ಯೋತಿಭಾ ದೊಡಮನಿ, ಸುರೇಶ ಬಾರಕೇರ, ಮಂಜುನಾಥ ಜಾಡರ ಇತರರು ಇದ್ದರು.

ಖಾದಿರಬಿ ನಧಾಪ ನಿರೂಪಣೆ, ಆಯ್ ಕ್ಯೂ ಎ ಸಿ ಸಂಚಾಲಕ ಸಂತೋಷ ಹುಬ್ಬಳ್ಳಿ ಸ್ವಾಗತ, ರೆಡ್ ಕ್ರಾಸ ಘಟಕ ಸಂಚಾಲಕಿ ಸವಿತಾ ಚಿಕ್ಕಣ್ಣವರ ಪ್ರಾಸ್ತವಿಕ, ಪ್ರಸನ್ನ ಪಂಢರಿ ಅತಿಥಿಗಳನ್ನು ಪರಿಚಯ ವಸಂತ ಮುಂದಿನಮನಿ ವಂದನಾರ್ಪಣೆ ಮಾಡಿದರು.

# ಕೆಳಮಟ್ಟದಲ್ಲಿ ವಿಮಾನ ಹಾರಾಟ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಲಕ್ಷ್ಮೇಶ್ವರ ಸೇರಿದಂತೆ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿ ಕಳೆದ ನಾಲ್ಕು ದಿನಗಳಿಂದ ವಿಮಾನವೊಂದು ಅತ್ಯಂತ ಕೆಳಮಟ್ಟದಲ್ಲಿ ಹಾರಾಡುವದನ್ನು ಕಂಡು ಗ್ರಾಮಸ್ಥರು ಆತಂಕಕ್ಕೀಡಾಗಿದ್ದಾರೆ.

ಇದುವರೆಗೂ ಅತ್ಯಂತ ಮೇಲ್ಮಟ್ಟದಲ್ಲಿ ಹಾರಾಡುವದನ್ನು ಕಂಡಿದ್ದ ಗ್ರಾಮಸ್ಥರಿಗೆ ಈಗ ಏಕಾಏಕಿ ವಿಮಾನವೊಂದು ಅತ್ಯಂತ ಕೆಳಮಟ್ಟದಲ್ಲಿ ಹಾರಾಡುತ್ತಿರುವುದರಿಂದ ಇದೇನಾದರೂ ಮಾಹಿತಿ ಸಂಗ್ರಹಣೆಗಾಗಿ ಅಥವಾ ಬೌಗೋಳಿಕ ಖನಿಜ ಸಂಪತ್ತುಗಳ ಸಂಶೋದನೆಗಾಗಿ ಅನ್ವೇಷಣೆಯೇ? ಎಂಬ ಪ್ರಶ್ನೆ ಒಂದು ಕಡೆ ಆದರೆ ವಿಮಾನಯಾನ ಇಲಾಖೆಯವರು ಆಗಲಿ ಜಿಲ್ಲಾಧಿಕಾರಿಗಳಾಗಲಿ ಪೋಲೀಸ್ ಇಲಾಖೆಯವರು ಆಗಲಿ ಯಾವುದೇ ಸ್ಪಷ್ಟವಾಗಿ ಮಾಹಿತಿಯನ್ನು ಹರಿಬಿಟ್ಟಿಲ್ಲ.

# ಜಿಲ್ಲಾ ಬಾಲ ಭವನದಲ್ಲಿ ಬೇಸಿಗೆ ಶಿಬಿರ

ಬಾಗಲಕೋಟೆ: ಪ್ರಸಕ್ತ ಸಾಲಿಗೆ ಜಿಲ್ಲಾ ಬಾಲಭವನದಿಂದ 6 ರಿಂದ 16 ವರ್ಷದ ಮಕ್ಕಳಿಗೆ, ಮೇ 11 ರಿಂದ 25 ವರೆಗೆ 15 ದಿನಗಳ ಬೇಸಿಗೆ ಶಿಬಿರ ಹಮ್ಮಿಕೊಳ್ಳಲಾಗಿದೆ. ಸದರಿ ಬೇಸಿಗೆ ಶಿಬಿರದಲ್ಲಿ ಮಕ್ಕಳಿಗೆ ಚಿತ್ರಕಲೆ, ಕರಕುಶಲ, ಜೇಡಿ ಮಣ್ಣಿನ ಕಲೆ, ಸಮೂಹ ಸಂಗೀತ, ಸಮೂಹ ನೃತ್ಯ ಮತ್ತು ಯೋಗ, ಕರಾಟೆ, ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಆಸಕ್ತ ಮಕ್ಕಳು ಮೇ 11 ರೊಳಗಾಗಿ ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಇಲಾಖೆ, ಬಾಗಲಕೋಟೆ ಇವರಲ್ಲಿ ಹೆಸರು ನೋಂದಾಯಿಸಿಕೊಳ್ಳುವಂತೆ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354-235463ಗೆ ಸಂಪರ್ಕಿಸಬಹುದಾಗಿದೆ.

# ಜಗತ್ತಿಗೆ ರೆಡ್ ಕ್ರಾಸ್ ಕೊಡುಗೆ ಅಪಾರ: ಅಧ್ಯಕ್ಷ ಸೋಮರೆಡ್ಡಿ ಅಳವಂಡಿ

**ಬೆಳಗಾವಿ ವಾರ್ತೆ ಕೊಪ್ಪಳ :** ಇಂದಿನ ಯುವಕರು ದೇಶಕ್ಕೆ ಏನಾದರೂ ಕೊಡಗೆ ಸಲ್ಲಿಸುವುದಾದರೆ ನಿಮ್ಮ ಅಕ್ಕಪಕ್ಕದ ಜನರ ಸಂಕಷ್ಟಗಳಿಗೆ ಸ್ಪಂದಿಸಿದರೆ ಸಾಕು ಅದು ದೇಶಕ್ಕೆ ಕೊಡುಗೆ ನೀಡಿದಂತೆ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನಗರದ ದಕ್ಷಿಣ ಭಾರತ ಹಿಂದಿ ಪ್ರಚಾರ ಸಭೆಯ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯ ಕೊಪ್ಪಳದ ರಾಷ್ಟ್ರೀಯ ಸೇವಾ ಯೋಜನೆ ಘಟಕ, ಯುವ ರೆಡ್ ಕ್ರಾಸ್ ಘಟಕ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಕೊಪ್ಪಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ ವಿಶ್ವ ರೆಡ್ ಕ್ರಾಸ್ ದಿನಾಚರಣೆಯ ನಿಮಿತ್ತವಾಗಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಇವತ್ತಿನ ಯುವ ಜನತೆ ದೇಶಕ್ಕೆ ಏನಾದರೂ ಸೇವೆ ಸಲ್ಲಿಸುವದಿದ್ದರೆ ಮಾನವೀಯ ಮೌಲ್ಯಗಳೊಂದಿಗೆ ದಿನಂಪ್ರತಿ ನಿಮ್ಮ ಸುತ್ತಮುತ್ತ ನಡೆಯುವ ಘಟನೆಗಳಿಗೆ ಸ್ಪಂದಿಸಿ ಅಂತಹ ಘಟನೆಯಲ್ಲಿ ಸಿಲುಕಿದ ವ್ಯಕ್ತಿಗಳಿಗೆ ನೀವು ಉಪಚರಿಸುವುದರ ಮೂಲಕ ಸೇವೆಯನ್ನು ಸಲ್ಲಿಸಿದಂತಾಗುತ್ತದೆ.

ಅದೇ ರೀತಿ ನೀವು ರೆಡ್ ಕ್ರಾಸ್ ಸಂಸ್ಥೆಯಲ್ಲಿ ತೊಡಗಿಸಿ ಕೊಂಡು ಹಲವಾರು ಸೇವೆಗಳನ್ನು ಮನುಕುಲಕ್ಕೆ ಸಲ್ಲಿಸಬಹುದು ಏಕೆಂದರೆ ರೆಡ್ ಕ್ರಾಸ್ ಸಂಸ್ಥೆಗೆ ಜಾತಿ ಧರ್ಮ ಮತ ಪಂಥ ದೇಶ ಗಳ ಕುರಿತು ತಾರತಮ್ಯವಿರುವುದಿಲ್ಲ ಇವುಗಳಿಂದ ಮುಕ್ತವಾಗಿ ದೇಶ ಸೇವೆಯನ್ನು ಹಾಗೂ ಮಾನವ ಕುಲದ ಸೇವೆಯನ್ನು ಮಾಡುವ ಉದ್ದೇಶವನ್ನು ಈ ಸಂಸ್ಥೆ ಹೊಂದಿರುತ್ತದೆ.

ಸಂಸ್ಥೆಯ ಉದ್ದೇಶ ಶಾಂತಿಯುತವಾಗಿ ವಿಪತ್ತುಗಳ ಸಂದರ್ಭದಲ್ಲಿ, ಯುದ್ಧದ ಸಂದರ್ಭಗಳಲ್ಲಿ ಇನ್ನೂ ಮುಂತಾದ ಸಮಯದಲ್ಲಿ ಜನರಿಗೆ ಸೇವೆಯನ್ನು ಸಲ್ಲಿಸುವುದು ಮತ್ತು ಉಪಚರಿಸುವ ಕಾರ್ಯವನ್ನು ಸಂಸ್ಥೆಯು ಮಾಡುತ್ತದೆ. ಸಂಸ್ಥೆಯಿಂದ ಯಾವುದೇ ಫಲಾಪೇಕ್ಷೆಯನ್ನು ನಿರೀಕ್ಷಿಸದೆ ಯುವಕರು ಸೇವೆಯನ್ನು ಸಲ್ಲಿಸಬಹುದು.

ನಮ್ಮ ಜಿಲ್ಲಾ ಶಾಖೆಯು ಮೂರು




ಬಾರಿ ರಾಜ್ಯಪಾಲರ ಪ್ರಶಸ್ತಿಯನ್ನು ಪಡೆಯುವುದರೊಂದಿಗೆ ಅತಿ ಹೆಚ್ಚು ರಕ್ತ ಸಂಗ್ರಹಣೆಗೆ ದೇಶಕ್ಕೆ ಮಾದರಿಯಾದ ಜಿಲ್ಲೆಯಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾಕ್ಟರ ಮಂಜುನಾಥ್ ಬಿ ಸಜ್ಜನ್ ಉಪಸಭಾಪತಿಗಳು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಕೊಪ್ಪಳ ಇವರು ಮಾತನಾಡಿ ರೆಡ್ ಕ್ರಾಸ್ ಸಂಸ್ಥೆಯ ಕೊಡುಗೆ ವಿಶ್ವಕ್ಕೆ ಅತ್ಯಂತ ಶ್ರೇಷ್ಠವಾದದ್ದು. ಇದು ಮಾನವನ ಜೀವನದಲ್ಲಿ ಮಾನವೀಯತೆಯ ಮೌಲ್ಯಗಳನ್ನು ಹುಟ್ಟುಹಾಕುವದರೊಂದಿಗೆ ಸ್ವಯಂ ಸೇವಾ ಮನೋಭಾವನೆಯನ್ನು ಬೆಳೆಸುತ್ತದೆ. ಯುದ್ಧದ ಸಂದರ್ಭದಲ್ಲಿ ಜನರು ಭಯಭೀತರಾಗಿ ಪಲಾಯನ ಮಾಡುವಾಗ ಅಲ್ಲಿ ಗಾಯಾಳುಗಳಿಗೆ ಉಪಚರಣೆಯನ್ನು ಮಾಡುವ ಪ್ರಥಮ ಸಂಸ್ಥೆ ಇದಾಗಿರುತ್ತದೆ.

ನೀವು ಸಹ ರೆಡ್ ಕ್ರಾಸ್ ಸಂಸ್ಥೆಯೊಂದಿಗೆ ಸೇರಿಕೊಂಡು ನೈಸರ್ಗಿಕ ವಿಪತ್ತುಗಳ ಸಂಭವಿಸಿದಾಗ ಅದರಲ್ಲಿ ಪಾಲ್ಗೊಂಡು ನಿಸ್ವಾರ್ಥ ಸೇವೆಯನ್ನು ಸಮಾಜಕ್ಕೆ ಸಲ್ಲಿಸಬಹುದು. ನಮ್ಮ ರೆಡ್ ಕ್ರಾಸ್ ಸಂಸ್ಥೆಯು ಕೇವಲ ರಕ್ತ ಬಂಡಾರವಾಗಿ ಕಾರ್ಯನಿರ್ವಹಿಸದೆ ಹಲವಾರು ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದೆ.

ಮಾನವೀಯತೆ ಯೊಂದಿಗೆ ಸಮಾಜದಲ್ಲಿ ನಾವೆಲ್ಲರೂ ಸೇರಿ ಕೆಲಸ ಮಾಡಿ ಒಂದು ಆರೋಗ್ಯಯುತವಾದ ಉತ್ತಮ ಸಮಾಜವನ್ನು ನಿರ್ಮಾಣ ಮಾಡುವುದು ನಮ್ಮ ಕರ್ತವ್ಯವಾಗಿದೆ.

ರೆಡ್ ಕ್ರಾಸ್ ಸಂಸ್ಥೆಯು ಮಾನವೀಯತೆ, ಸ್ವಾತಂತ್ರ್ಯ, ನಿಷ್ಪಕ್ಷಪಾತ, ತಟಸ್ಥತೆ, ಸ್ವಯಂಸೇವೆ, ಏಕತೆ ಮತ್ತು ಸಾರ್ವತ್ರಿಕ ವಾದ ಮೂಲಭೂತ ತತ್ವಗಳೊಂದಿಗೆ ನಿಸ್ವಾರ್ಥ ಸೇವೆಯನ್ನು ಸಲ್ಲಿಸುತ್ತದೆ ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಬಸವರಾಜ ಎಸ್.ಎಂ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿ ಮಾತನಾಡಿ ಅಂತರಾಷ್ಟ್ರೀಯ ಮಟ್ಟದಲ್ಲಿ 1859 ರಲ್ಲಿ ಇಟಲಿ ಆಸ್ಟ್ರೇಲಿಯಾ ಮತ್ತು ಫ್ರಾನ್ಸ್ ಗಳ ನಡುವೆ ಯುದ್ಧ ನಡೆದಾಗ ಸಾಕಷ್ಟು ಸೈನಿಕರು ಮತ್ತು ಜನರು ಯುದ್ಧದ ಭೀತಿಯಿಂದಾಗಿ ಗಾಯಗೊಂಡಾಗ ಮತ್ತು ಮೃತರಾದಾಗ ಅವರನ್ನು ಉಪಚರಿಸುವ ವ್ಯಕ್ತಿಗಳು ಯಾರು ಇರಲಿಲ್ಲ, ಆಗ ನೆಪೋಲಿಯನ್ ಜೊತೆ ವ್ಯವಹಾರಕ್ಕಾಗಿ ಚರ್ಚಿಸಲು ಯುವ ವ್ಯಾಪಾರಸ್ಥ ಸರ್ ಜೀನ್ ಹೆನ್ರಿ ಡ್ಯೂನೆಂಟ್ ರವರು ಆಗಮಿಸುವಾಗ ಆ ಗಾಯಗೊಂಡವರನ್ನು ನೋಡಿ ಅಲ್ಲೇ ಅವರು ಉಪಚರಿಸಲ್ಪಟ್ಟರು ಮತ್ತು ಪ್ರಥಮ ಚಿಕಿತ್ಸೆಯನ್ನು ನೀಡಲ್ಪಟ್ಟರು ನಂತರ 1863 ರಲ್ಲಿ ಅಂತಾರಾಷ್ಟ್ರೀಯ ರೆಡ್ ಕ್ರಾಸ್ ಸಂಸ್ಥೆಯನ್ನು ಜಿನೇವಾದಲ್ಲಿ ಸ್ಥಾಪಿಸಲ್ಪಟ್ಟರು.

ನಂತರ ಇದು ವಿಶ್ವದಾದ್ಯಂತ ಅಂತರಾಷ್ಟ್ರೀಯ ರೆಡ್ ಕ್ರಾಸ್ ಸಂಸ್ಥೆಯಾಗಿ ಬೆಳೆಯಲ್ಪಟ್ಟಿತು. ಭಾರತದಲ್ಲಿ 1920 ರಲ್ಲಿ ಮತ್ತು ಕರ್ನಾಟಕದಲ್ಲಿ 1921 ರಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಸ್ಥಾಪಿತವಾಯಿತು.

ಈ ಸಂಸ್ಥೆಯು ಮುಖ್ಯವಾಗಿ 7 ಮೂಲಭೂತ ತತ್ವಗಳನ್ನು ಒಳಗೊಂಡಿರುತ್ತದೆ. ಪ್ರತಿ ವರ್ಷ ಮೇ 8ನೇ ತಾರೀಕಿನಂದು ಸರ್ ಹೆನ್ರಿ ಡ್ಯೂನೆಂಟ್ ರವರ ಜನ್ಮದಿನವನ್ನು ವಿಶ್ವ ರೆಡ್ ಕ್ರಾಸ್ ದಿನಾಚರಣೆ ಯನ್ನಾಗಿ ಜಗತ್ತಿನಾದ್ಯಂತ ಆಚರಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷೀಯ ಭಾಷಣವನ್ನು ಉಷಾದೇವಿ ಹಿರೇಮಠ ಪ್ರಾಚಾರ್ಯರು ಮಾತನಾಡಿ ಯಾವುದೇ ಪ್ರದೇಶದಲ್ಲಿ ಭೂಕಂಪ, ನೈಸರ್ಗಿಕ ವಿಪತ್ತು ಅಥವಾ ಮಾನವ ನಿರ್ಮಿತ ವಿಪತ್ತು ಉದ್ಭವಿಸಿದರೆ ಅಲ್ಲಿ ಗೋಚರಿಸುವುದು ರೆಡ್ ಕ್ರಾಸ್ ಸಂಸ್ಥೆ, ರೆಡ್ ಕ್ರಾಸ್ ಸಂಸ್ಥೆಯ ಚಿಹ್ನೆಯೊಂದಿಗೆ ಸೇವೆ ಮಾಡುವಾಗ ಯಾವುದೇ ರೀತಿಯ ಅಂತ ಸೇವಕರಿಗೆ ದಾಳಿಗಳನ್ನು ಮಾಡುವುದಿಲ್ಲ, ಹಲವಾರು ವಿಪತ್ತುಗಳು ಸಂಭವಿಸಿದಾಗ ನಮ್ಮ ಕೊಪ್ಪಳ ರೆಡ್ ಕ್ರಾಸ್ ಸಂಸ್ಥೆಯಿಂದಲೂ ಸಹ ಸಾಕಷ್ಟು ಸೇವೆಯನ್ನು ಸಲ್ಲಿಸಲಾಗಿದೆ. ಸೇವೆ ಸಲ್ಲಿಸುವುದು ಎಂದರೆ ನಿಮ್ಮ ಸುತ್ತಮುತ್ತ ಉಂಟಾಗುವ ವಿಪತ್ತುಗಳಿಗೂ, ಅಪಾಯಗಳಿಗೂ ಸಹ ನೀವು ಸಹಾಯವನ್ನು ಮಾಡಬಹುದು ಅದು ಕೂಡ ಸೇವೆಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಯು.ಎಸ್ ಸೊಪ್ಪಿ ಮಠ ಉಪನ್ಯಾಸಕರು, ಸೋಮಶೇಖರ್ ರಾಜು ಯು ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಕಾರ್ಯಕ್ರಮದಲ್ಲಿ ಪ್ರಗತಿ ಸ್ವಾಗತಿಸಿದರು, ಸೌಮ್ಯ ನಾಲ್ವಾಡ ಪ್ರಾರ್ಥಿಸಿದರು, ಕುಮಾರ ಬಸವರಾಜ್ ಘರ್ಜಿನಾಳ ವಂದಿಸಿದರು, ನಿರೂಪಣೆ ಯನ್ನು ಕುಮಾರ ಸಂಕಲ್ಪ ನೆರವೇರಿಸಿದರು.

# "ಕೂಡಿ ಬಂತು ಕಂಕಣ ಬಲ" ನಾಟಕ ಪ್ರಯೋಗ, ಮತ್ತು ನಾಟಕದ ಕೃತಿ ಬಿಡುಗಡೆ



**ಬೆಳಗಾವಿ ವಾರ್ತೆ ಕೊಪ್ಪಳ :** ಕೊಪ್ಪಳ ತಾಲುಕಿನ ಮೈನಹಳ್ಳಿ ಗ್ರಾಮದ ಶ್ರೀ ಶಿವಶರಣೆ ಬುಡ್ಡಮ್ಮ ದೇವಿಯ ಜಾತ್ರೆಯ ಪ್ರಯುಕ್ತ ಶ್ರೀ ಗುರುಬಸವರಾಜೇಶ್ವರ ನಾಟ್ಯ ಸಂಘ ಮೈನಹಳ್ಳಿ ದಿ.4-03-2026 ರಂದು ಅಭಿನಯಿಸಿದ "ಕೂಡಿ ಬಂತು ಕಂಕಣ ಬಲ ( ಸುಂದರ ಸಾಮಾಜಿಕ ನಾಟಕ ) ನಾಟಕಕ್ಕೆ ದಿ. ಮಹಾದೇವಪ್ಪ.ನಿ. ಬಾಸಿಂಗದಾರ ಮಾ. ತಾ.ಪಂ.ಅಧ್ಯಕ್ಷರ ಇವರ ಸ್ಮರಣಾರ್ಥ ಅವರ ಮಕ್ಕಳಾದ ಮಂಜುನಾಥ ಬಾಸಿಂಗದಾರ ಶಿಕ್ಷಕರು ಮತ್ತು ಸುಧಿರಬಾಬು ಬಾಸಿಂಗದಾರ ಕೆ.ಇ.ಬಿ ಮತ್ತು ಶ್ರೀ ಕನ್ನಡಾಂಬೆ ಯುವಕರ ಸಂಘದ ಅಧ್ಯಕ್ಷರಾದ ವಿರುಪಾಕ್ಷಯ್ಯ ತೋಟದವರು ಮತ್ತು ಸಂಘದ ಸದಸ್ಯರ ಸಹಾಯದಿಂದ ಅವರ ಆಶ್ರಯದಲ್ಲಿ 3ನೇ ಬಾರಿಗೆ ನಾಟಕ ಪ್ರದರ್ಶನ ಕಂಡಿತು , ಮತ್ತು ಕೊಟ್ರೇಶ ಬಳಗೇರಿ. ನಿ. ಶಿಕ್ಷಕರು ಅವರ ತಂದೆಯವರಾದ ದಿ. ಫಕೀರಣ್ಣ .ಬ. ಬಳಿಗೇರಿ ಇವರ ಸ್ಮರಣಾರ್ಥ ಮುದ್ರಣಕ್ಕೆ ಸಹಕರಿಸಿದ್ದಕ್ಕೆ ರಂಗಪ್ರಯೋಗದ ಸಂದರ್ಭದಲ್ಲಿ ನಾಟಕದ ಪುಸ್ತಕ ಬಿಡುಗಡೆ ಮಾಡಲಾಯಿತು. ನಾಟಕ ಪುಸ್ತಕವನ್ನು ಈಶಪ್ಪ ಮಾಸ್ತರ ಓಜನಹಳ್ಳಿ ಸಂಗೀತ ನಿರ್ದೇಶಕರು ಬಿಡುಗಡೆ ಮಾಡಿ ನಾಟಕದ ಬಗ್ಗೆ ಮಾತನಾಡುತ್ತ ಕವಿಗಳ ಶ್ರಮ, ಸಾಹಿತ್ಯದ ಸಾಧನೆಯ ಬಗ್ಗೆ ತಿಳಿಸಿದರು. ಮತ್ತು ಕೊಟ್ರೇಶ ಬಳಗೇರಿ ನಿ. ಶಿಕ್ಷಕರು ಕವಿಗಳ ತಮ್ಮ ಒಟನಾಟ, ಚಟುವಟಿಕೆ ಬಗ್ಗೆ ತಿಳಿಸಿದರು ನಂತರ ಕವಿಗಳಾದ ಡಾ. ಷಣ್ಮುಖಯ್ಯ. ಎ. ತೋಟದರುವರು ಸನ್ಮಾನವನ್ನು ಸ್ವೀಕರಿಸಿ ಮಾತಾಡುತ್ತ ಮಾಹಾದೇವಪ್ಪ ಬಾಸಿಂಗದಾರ ಮಾ. ತಾ. ಪ. ಅಧ್ಯಕ್ಷರಾಗಿದ್ದಾಗ ಮಾಡಿದ ಸಾಧನೆ , ಜೊತೆಗೆ ಕನ್ನಡಾಂಬೆ ಯುವಕರ ಸಂಘ(ರಿ) ಗ್ರಾಮದ ಅಭಿವೃದ್ಧಿಗೆ ನೀಡಿದ ಕೊಡುಗೆ ಮತ್ತು ಕಾರ್ಯಕ್ರಮಗಳ ಬಗ್ಗೆ ಹಾಗು ಕೋಟ್ರೇಶ ಬಳಿಗೇರಿಯವರು ನಾಟಕ, ಸಾಹಿತ್ಯದ ಒಲವಿನ ಬಗ್ಗೆ ತಿಳಿಸುತ್ತ ಸಹಾಯ ಮತ್ತು ಸಹಕಾರ ನೀಡಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತ ನಾಟಕವು ಸಮಾಜದ ಲೊಪ ದೋಷಗಳನ್ನು ರಂಗ ಪ್ರಯೋಗ ಮಾಡುವದರ ಮೂಲಕ ತಿದ್ದುವ ಕಾರ್ಯ ಮಾಡುತ್ತದೆ. ಇಂದಿನ ಸಮಾಜಕ್ಕೆ ರಂಗಭೂಮಿ ಅವಶ್ಯವಿದೆ ಎಂದು ತಿಳಿಸಿದರು .

ಈ ಸಂದರ್ಭದಲ್ಲಿ ಹಿರಿಯ ಕಲಾವಿದರು ಮತ್ತು ಸಮಾಜ ಸೇವಕರು, ಎಸ್.ಎಸ್. ಎಲ್.ಸಿ.ಯಲ್ಲಿ ಹೆಚ್ಚು ಅಂಕ ಗಳಿಸಿದ ಅಭೀಷೆಕ ಬಳಿಗೇರಿ ಮತ್ತು ಸಂಪಾದಕರಾದ ಉದಯ.ಎಸ್. ತೋಟದ ಯುವ ಜಾಗೃತಿ ದಿನ ಪತ್ರಿಕೆ ಸೇರಿ ಎಲ್ಲರಿಗೂ ಸನ್ಮಾನ ಮಾಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾಂತೇಶ. ಮಾ, ಪಾಟೀಲ ಮೈನಹಳ್ಳಿ ವಹಿಸಿದ್ದರು , ವೇದಿಕೆ ಮೇಲಿಂದ ಗಣ್ಯರು ಜ್ಯೋತಿ ಬೆಳಗಿಸುವದರ ಮೂಲಕ ನಾಟಕಕ್ಕೆ ಚಾಲನೆ ನೀಡಿದರು. ಕನ್ನಡಾಂಭೆ ಸಂಘದ ಅಧ್ಯಕ್ಷರು ಸಂಘದ ಮುಂದಿನ ಗುರಿ ತಿಳಿಸುತ್ತ ಪ್ರಸ್ತಾವಿಕ ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಸಂಘದ ಹಿತೈಸಿಗಳಾದ ಶ್ರೀಧರ ಕುರಡಿಗಿ, ಮಲ್ಲಿಕಾರ್ಜುನ ಹಳ್ಳಿ, ಜಗದೀಶ ಬಾಸಿಂಗದಾರ . ಗುರುರಾಜ ಮೂಲಿಮನಿ , ತಿಪ್ಪಣ್ಣ ಹೂಗಾರ ವೇದಿಕೆ ಮೇಲಿದ್ದರು.

ಕಾರ್ಯಕ್ರದ ನಿರೂಪಣೆ ಶಂಕ್ರಯ್ಯ ಕಾಟ್ರಳ್ಳಿ, ಬನ್ನಪ್ಪ ಕತ್ತಿ , ಮಲ್ಲಪ್ಪ ಗುಡದಣ್ಣವರು ನಡೆಸಿ ಕೊಟ್ಟರು.

## ಚಿತ್ರಕಲಾ ಶಿಲ್ಪಿ ಶ್ರೀ. ಡಿ.ವ್ಹಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್

# ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ




**ಬೆಳಗಾವಿ ವಾರ್ತೆ ಧಾರವಾಡ:** ಚಿತ್ರಕಲಾ ಶಿಲ್ಪಿ ಶ್ರೀ. ಡಿ.ವ್ಹಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ವತಿಯಿಂದ ಮಕ್ಕಳ ಬೇಸಿಗೆ ಶಿಬಿರ–2026 ನ್ನು ಒಂದು ತಿಂಗಳವರೆಗೆ ಆಯೋಜಿಸಿದ್ದು, ನಿನ್ನೆ (ಮೇ 6) ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.

ಚಿತ್ರಕಲಾ ಶಿಲ್ಪಿ ಶ್ರೀ ಡಿ.ವ್ಹಿ. ಹಾಲಭಾವಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ, ದೀಪ ಬೆಳಗಿಸುವುದರ ಮೂಲಕ ಸಮಾರೋಪ ಕಾರ್ಯಕ್ರಮದ ಉದ್ಘಾಟನೆ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಖ್ಯಾತ ಕಲಾವಿದ ವಿಜಯ ರಾಮಚಂದ್ರ ದೊಂಗಡೆ ಅವರು ಮಾತನಾಡುತ್ತಾ, ಚಿಕ್ಕ ಮಕ್ಕಳಿಗಾಗಿ ಇಂತಹ ಕಾರ್ಯಕ್ರಮ ಮತ್ತು ಶಿಬಿರಗಳನ್ನು ಮೇಲಿಂದ ಮೇಲೆ ಆಯೋಜಿಸಬೇಕು ಅದರ ಜೊತೆಗೆ ಪಾಲಕರು ಕೂಡ ಮಕ್ಕಳಲ್ಲಿರುವ ಕಲೆಯನ್ನು ಹೊರತರುವ ನಿಟ್ಟಿನಲ್ಲಿ ಪ್ರೋತ್ಸಾಹಿಸಬೇಕು ಎಂದು ಹೇಳಿದರು. ಮನೆಯವರಿಂದ ಮಕ್ಕಳಿಗೆ ದಿನನಿತ್ಯ ಅಭ್ಯಾಸದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಬೇಕು ಎಂದರು.

ಶಿಬಿರದ ಶಿಕ್ಷಕರಾದ ಮಾಧವಿ ಅವರು ಮಾತನಾಡುತ್ತಾ ಶಿಬಿರದಲ್ಲಿ ಚಿತ್ರವನ್ನು ರಚಿಸಲು ಬೇಕಾಗುವ ಸಾಮಗ್ರಿಗಳನ್ನು ಟ್ರಸ್ಟ್ ವತಿಯಿಂದ ಪೂರೈಸಿದ್ದು, ಇದು ಮಕ್ಕಳಲ್ಲಿ ಏಕರೂಪತೆ ಮೂಡಿಸಿತು ಮತ್ತು ಮಕ್ಕಳನ್ನು ಶಿಬಿರಕ್ಕೆ ಕಳಿಸುವಲ್ಲಿ ಪಾಲಕರ ಆಸಕ್ತಿ ಬಗ್ಗೆ ಮೆಚ್ಚಿ ಮಾತನಾಡಿದರು.

ಟ್ರಸ್ಟಿನ ಅಧ್ಯಕ್ಷ ಬಿ ಮಾರುತಿ ಅವರು ಶ್ರೀ ಡಿ.ವ್ಹಿ. ಹಾಲಭಾವಿ ಅವರಿಗೆ ಇದ್ದಂತಹ ಕಲಾಸಕ್ತಿಯ ಕುರಿತಾದ ಚಿಂತನೆಯನ್ನು ವಿವರಿಸುತ್ತಾ, ಅವರ ಅನಿಸಿಕೆಗಳನ್ನು ಸಾದರ ಪಡಿಸುವ ನಿಟ್ಟಿನಲ್ಲಿ ಹಲವು ಕಾರ್ಯಕ್ರಮಗಳು ಮತ್ತು ಶಿಬಿರವನ್ನು ಪ್ರತಿ ವರ್ಷ ಆಯೋಜಿಸುತ್ತಾ ಬಂದಿದೆ. ಈ ಶಿಬಿರದಲ್ಲಿ ಎಲ್ಲ ಮಕ್ಕಳು ತುಂಬಾ ಆಸಕ್ತಿಯಿಂದ ಚಿತ್ರವನ್ನು ರಚಿಸಿ ಶಿಬಿರವನ್ನು ಯಶಸ್ವಿಗೊಳಿಸಿದ್ದಾರೆ. ಇದೆ ರೀತಿ ಮುಂದಿನ ವರ್ಷವೂ ಸಹ ಶಿಬಿರದಲ್ಲಿ ಮಕ್ಕಳು ಭಾಗವಹಿಸಬೇಕೆಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಶಿಬಿರದಲ್ಲಿ ಭಾಗವಹಿಸಿದ ಶಿಬಿರಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಾಗೂ ಶಿಬಿರದಿಂದ ತಮಗಾದ ಅನುಭವಗಳನ್ನು ಹಂಚಿಕೊಂಡರು. ಶಿಬಿರದಲ್ಲಿ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ಅತಿಥಿ–ಗಣ್ಯರು ಹಾಗೂ ಟ್ರಸ್ಟ್ ಸದಸ್ಯರು ಪ್ರದಾನ ಮಾಡಿದರು.

ಸುರೇಶ ಹಾಲಭಾವಿ ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಹಾಲಭಾವಿ ಟ್ರಸ್ಟ್ ಕಾರ್ಯಕ್ರಮಗಳ ಕುರಿತು ತಿಳಿಸಿದರು. ಕಾರ್ಯಕ್ರಮದಲ್ಲಿ ಡಾ. ಬಿ.ಎಚ್.ಕುರಿಯವರ ಅವರು ಸ್ವಾಗತಿಸಿದರು. ಎಫ್. ವ್ಹಿ. ಚಿಕ್ಕಮಠ ನಿರೂಪಿಸಿದರು. ಮತ್ತು ಡಿ. ಎಂ. ಬಡಿಗೇರ್ ಅವರು ವಂದಿಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟಿನ ಸದಸ್ಯ ಕಾರ್ಯದರ್ಶಿ ಕುಮಾರ ಬೆಕ್ಕೇರಿ, ಎಸ್.ಕೆ ಪತ್ತಾರ, ಶಿಬಿರದ ಶಿಕ್ಷಕರಾದ ಸುಹಾನಿ ದುಂದುರ್, ಎ.ಜಿ.ಮಾಧವಿ ಹಾಗೂ ಹಿರಿಯ ಕಲಾವಿದರು ಹಾಗೂ ಕಲಾಸಕ್ತರು ಹಾಗೂ ಪೋಷಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಇಂಗಳಗಾಂವ ತೀರ್ಥ ಗ್ರಾಮದ ಸೀಮಿ ಲಕ್ಷ್ಮಿದೇವಿ ದೇವಸ್ಥಾನಕ್ಕೆ ಶಾಸಕ ಲಕ್ಷ್ಮಣ ಸವದಿಯಿಂದ ಅಡಿಗಲ್ಲು



**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ನದಿ ಇಂಗಳಗಾಂವ ಹಾಗೂ ತೀರ್ಥ ಗ್ರಾಮದ ಗಡಿ ಭಾಗದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಶ್ರೀ ಸೀಮಿ ಲಕ್ಷ್ಮಿದೇವಿ ದೇವಸ್ಥಾನದ ಕಟ್ಟಡದ ಅಡಿಗಲ್ಲು ಸಮಾರಂಭವು ಶನಿವಾರ ವಿಜೃಂಭಣೆಯಿಂದ ನೆರವೇರಿತು.

ಕಾರ್ಯಕ್ರಮದಲ್ಲಿ ಎರಡೂ ಗ್ರಾಮಗಳ ಮುಖಂಡರು ಪಂಚಾಯತಿ ಸದಸ್ಯರು, ಭಕ್ತಾದಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ಅಡಿಗಲ್ಲು ಸಮಾರಂಭದ ಅಂಗವಾಗಿ ವಿಶೇಷ ಪೂಜೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು

ಅಥಣಿ ಮತಕ್ಷೇತ್ರದ ಶಾಸಕ ಲಕ್ಷ್ಮಣ ಸವದಿ ಅವರು ದೇವಸ್ಥಾನದ ಕಾಮಗಾರಿಗೆ ವಿಧ್ಯುಕ್ತವಾಗಿ ಅಡಿಗಲ್ಲು ನೆರವೇರಿಸಿ ಚಾಲನೆ ನೀಡಿ ಮಾತನಾಡಿದ ಅವರು ನದಿ ಇಂಗಳಗಾಂವ ಮತ್ತು ತೀರ್ಥ ಗ್ರಾಮಸ್ಥರ ಹಲವು ವರ್ಷಗಳ ಬೇಡಿಕೆಯಾಗಿದ್ದ ಈ ದೇವಸ್ಥಾನ ನಿರ್ಮಾಣಕ್ಕೆ ಸರ್ಕಾರದಿಂದ ಅಗತ್ಯ ಅನುದಾನ ಒದಗಿಸಲಾಗುವುದು ಈ ದೇವಾಲಯವು ಎರಡೂ ಗ್ರಾಮಗಳ ಭಾವೈಕ್ಯತೆಯ ಸಂಕೇತವಾಗಲಿದೆ ಎಂದರು.

ಇನ್ನೂ ಈ ವೇಳೆ ದೇವಸ್ಥಾನದ ನಿರ್ಮಾಣಕ್ಕೆ ಭೂ ದಾನ ಮಾಡಿದ ಪ್ರವೀಣ ನಾಡಗೌಡ ಹಾಗೂ ವಿಜಯ ಮಹಾಂತೇಶ ನಾಡಗೌಡ ತೇರದಾಳ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು, ಈ ಸಂಧರ್ಭದಲ್ಲಿ ಗುತ್ತಿಗೆದಾರರಾದ ಶಿವರುದ್ರ ಗೂಳಪ್ಪನ್ನವರ, ಸಂಜಯ ನಾಡಗೌಡ,ಮಲ್ಲಪ್ಪ ಠಕ್ಕಣ್ಣವರ,ಅಲಗೌಡ ಮುದಿಗೌಡರ,ಸಂಗಪ್ಪ ಸಾವಂತ್ರಿ, ಪರೀಧ ನನ್ನೆ, ಅಪ್ಪು ಮಧಬಾವಿ, ವಿಜಯ ಕಾಂಬಳೆ, ಚಿದಾನಂದ ಕಾಂಬಳೆ, ಮಹಾಂತೇಶ ಗೂಳಪ್ಪನ್ನವರ, ನಾಗಪ್ಪ ಗೂಳಪ್ಪನ್ನವರ, ಅರುಣ ಬಾಸಿಂಗಿ, ಲಕ್ಕಪ್ಪ ಠಕ್ಕಣ್ಣವರ, ರಾವಸಾಬ ಪಾಟೀಲ, ರಾಮಣ್ಣ ಯಡೂರ,ಉಸ್ಮಾನ ನದಾಫ ಸೇರಿದಂತೆ ಇನ್ನಿತರು ಉಪಸ್ಥಿತರಿದ್ದರು

## ಧಾರವಾಡ ರಂಗಾಯಣಕ್ಕೆ ಝುಕೀರ ನದಾಫ ನೂತನ ನಿರ್ದೇಶಕ

# ಧಾರವಾಡದಲ್ಲಿ ಕಾಲೇಜು ರಂಗೋತ್ಸವ, ಬಹುಭಾಷಾ ನಾಟಕೋತ್ಸವ ಆಯೋಜನೆ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ರಂಗಾಯಣದ ನೂತನ ನಿರ್ದೇಶಕರಾಗಿ ಝುಕೀರ ನದಾಫ ನೇಮಕಗೊಂಡಿದ್ದು, ಅವರು ಧಾರವಾಡ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಸಭಾಭವನಲ್ಲಿ ಪತ್ರಿಕಾಗೋಷ್ಠಿ ಜರುಗಿಸಿ, ಮಾತನಾಡಿದರು.

ರಂಗಾಯಣದ ನಾಟಕ, ಕಲಾ ಕಾರ್ಯಕ್ರಮಗಳನ್ನು ಮತ್ತಷ್ಟು ಪ್ರಬಲವಾಗಿ ನಡೆಸಿ ಯುವ ಪ್ರತಿಭೆಗಳಿಗೆ ವೇದಿಕೆ ಒದಗಿಸುವ ಮೂಲಕ ಧಾರವಾಡದ ಸಾಂಸ್ಕೃತಿಕ ಚಟುವಟಿಕೆಗಳನ್ನು ಹೆಚ್ಚಿಸಲಾಗುವುದು ಎಂದು ಅವರು ಹೇಳಿದರು.

ಧಾರವಾಡದಲ್ಲಿ ಜಿಲ್ಲಾ ಮಟ್ಟದ ಕಾಲೇಜು ರಂಗೋತ್ಸವವನ್ನು ನಡೆಸಬೇಕೆಂದು ಕೊಂಡಿದ್ದೇವೆ. ಅದೇ ರೀತಿ ರಂಗಧ್ವನಿಯನ್ನು ಮತ್ತೆ ಪ್ರಾರಂಭಿಸುವ ಉದ್ದೇಶವನ್ನು ಸಹ ಹಾಕಿಕೊಂಡಿದ್ದೇವೆ ಎಂದು ಅವರು ತಿಳಿಸಿದರು.

ಜಿಲ್ಲೆಯಲ್ಲಿ ರಂಗಭೂಮಿಯಿಂದ ಬಹುಭಾಷಾ ನಾಟಕೋತ್ಸವಗಳನ್ನು ಕೂಡ ಆಯೋಜಿಸುವ ಯೋಜನೆಗಳಿವೆ. ಜನರು ಹೇಗೆ ಸಿನಿಮಾಗಳಿಗೆ ಪ್ರೋತ್ಸಾಹ, ಬೆಂಬಲಗಳನ್ನು ಸೂಚಿಸುತ್ತಾರೆಯೋ ಅದೇ ರೀತಿ ನಾಟಕ ಮತ್ತು ರಂಗಭೂಮಿಗೆ ಜನರು ಪ್ರೋತ್ಸಾಹವನ್ನು ನೀಡಿದರೆ, ರಂಗಭೂಮಿಯನ್ನು ಮತ್ತಷ್ಟು ಉತ್ತುಂಗ




ಮಟ್ಟಕ್ಕೆ ತೆಗೆದುಕೊಂಡು ಹೋಗುವುದಕ್ಕೆ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ರಂಗಾಯಣದ ಆಡಳಿತಾಧಿಕಾರಿ ಶಶಿಕಲಾ ಹುಡೇದ ಅವರು ಉಪಸ್ಥಿತರಿದ್ದರು.

### ಕಡಲೆ ಕಾಳು ಉತ್ಪನ್ನ ಖರೀದಿ ಕಾರ್ಯ ಮೇ. 28 ರವರೆಗೆ ವಿಸ್ತರಣೆ

ಧಾರವಾಡ: 2025–26 ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಪ್ರತಿ ಕ್ವಿಂಟಲ್‌ಗೆ ರೂ. 5,875 ರಂತೆ ಖರೀದಿಸಲು ನಿಗದಿಪಡಿಸಿರುವ ಕಾಲಾವಧಿಯನ್ನು ಏಪ್ರೀಲ್ 28, 2026 ರಿಂದ ಮೇ 28, 2026 ರವರೆಗೆ ವಿಸ್ತರಿಸಿದ್ದು, ನೋಂದಾಯಿತ ರೈತರಿಂದ ಮಾತ್ರ ಖರೀದಿಸಲಾಗುವುದು.

ಕಡಲೆಕಾಳು ಉತ್ಪನ್ನವನ್ನು ಪ್ರತಿ ಎಕರೆಗೆ 4 ಕ್ವಿಂಟಲ್‌ನಂತೆ ಪ್ರತಿ ರೈತರಿಂದ ಗರಿಷ್ಟ 40 ಕ್ವಿಂಟಲ್ ಖರೀದಿಸಲಾಗುತ್ತಿದ್ದು, ಜಿಲ್ಲೆಯಲ್ಲಿ 35 ಕಡಲೆಕಾಳು ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾಮಂಡಳ ಶಾಖೆ ಹುಬ್ಬಳ್ಳಿ ದೂರವಾಣಿ ಸಂಖ್ಯೆ: 0836–2004419 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸತ್ಯ ತತ್ವಗಳನ್ನು ಜಗತ್ತಿಗೆ ಸಾರಿದವರು ಬಸವಾದಿ ಶರಣರು




**ಬೆಳಗಾವಿ ವಾರ್ತೆ ವಿಜಯಪುರ:** 12ನೇ ಶತಮಾನದ ಬಸವಾದಿ ಶರಣರು ಭೌತಿಕ, ಅಧ್ಯಾತ್ಮಿಕ ಸತ್ಯ ತತ್ವಗಳನ್ನು ಜಗತ್ತಿಗೆ ನೀಡಿದ ಮಹಾತ್ಮರು, ಇಹಪರ ಎಂಬ ಅಖಂಡ ಪರಿಪೂರ್ಣ ನಿತ್ಯ, ಸತ್ಯ ಬದುಕಿನ ಶಿವಪಥವನ್ನು ಲೋಕಕ್ಕೆ ನೀಡಿದ ಮಹಾಂತರು ಎಂದು ಉಪನ್ಯಾಸಕಿ ಶಿಲ್ಪಾ ಭಸ್ಮೆ ಹೇಳಿದರು.

ನಗರದ ವೀರಶೈವ ಲಿಂಗಾಯತ ಸಭಾಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕ ಹಮ್ಮಿಕೊಂಡ 76ನೇ ಮಾಸಿಕ ಶಿವಾನುಭವ ಗೋಷ್ಠಿಯಲ್ಲಿ ಶರಣ ಏಕಾಂತ ರಾಮಯ್ಯನವರ ಅನುಭಾವ ಕುರಿತು ಅವರು ಮಾತನಾಡಿದರು.

ಶಿವನ ಭಕ್ತರಾದ ರಾಮಯ್ಯನವರು ಸತ್ಯ, ಶುದ್ಧ, ಕಾಯಕದೊಂದಿಗೆ ನಿರಾಳ ವ್ಯಕ್ತಿತ್ವ ಕಾಯಕ ನಿಷ್ಠೆ ಶಿವನ ಕುರಿತು ಧ್ಯಾನಸ್ತರಾಗಿ ಏಕಾಂತದಲ್ಲಿ ತಲ್ಲಿನರಾಗಿ ಶಿವನನ್ನು ಒಲಿಸಿಕೊಂಡವರು. ಅವರದು ಭ್ರಮರೇಶ್ವರ ದೇವರ ಗುಪ್ತ ಭಕ್ತಿ ಕಾಯಕ ತತ್ವ ತಿಳಿಸುತ್ತ ಜನರ ಜೀವನವನ್ನು ಪಾವನಗೊಳಿಸಿ ಭಕ್ತರನ್ನು ಮುಕ್ತರನ್ನಾಗಿ ಮಾಡಿದ ಏಕಾಂತ ರಾಮಯ್ಯ ಶರಣರ ಪಾದೋದಕ ಕಾಯಕದಲ್ಲಿ ನಿರತನಾದೊಡೆ ನಿಷ್ಠೆ ಪ್ರಾಮಾಣಿಕತೆ ಗುರುಭಕ್ತಿ ಮಾತಿಗಿಂತ ಕೃತಿ ಮುಖ್ಯ ಜೊತೆಗೆ ಕಾಯಕ ದಾಸೋಹ ವ್ಯಕ್ತಿತ್ವ ಮುಖ್ಯ ಎಂದು ಸಾರಿದವರು. ಏಕಾಂತ ರಾಮಯ್ಯ ಅವರು ಎನ್ನಅಯ್ಯ ಚನ್ನರಾಮೇಶ್ವರ ಎಂಬ ಅಂಕಿತ ನಾಮದಲ್ಲಿ ರಚಿಸಿದ 10 ವಚನಗಳು ಲಭ್ಯವಾಗಿವೆ. ಅವೆಲ್ಲವೂ ಶಿವನ ಧ್ಯಾನ, ಕಾಯಕತತ್ವ ನಿಷ್ಠೆಗೆ ಸಂಬಂಧಪಟ್ಟದ್ದಾಗಿವೆ ಎಂದು ಹೇಳಿದರು.

ಮಹಾಸಭೆಯ ಜಿಲ್ಲಾಧ್ಯಕ್ಷ ವಿ.ಸಿ. ನಾಗಠಾಣ ಮಾತನಾಡಿ ಏಕಾಂತ ರಾಮಯ್ಯನವರು ಸೋಮನಾಥನ ವರಪ್ರಸಾದದಿಂದ ಜನಿಸಿದರು. ಸದಾಕಾಲ ಶಿವನ ಸಮ್ಮುಖದಲ್ಲಿ ಧ್ಯಾನಸ್ತರಾಗಿರುತ್ತಿದ್ದರು. ಹೀಗಾಗಿ ಅವರಿಗೆ ಏಕಾಂತ ರಾಮಯ್ಯ ಎಂದು ಕರೆಯುತ್ತಿದ್ದರು. ಆಧ್ಯಾತ್ಮಿಕ ತತ್ವದ ಹಿನ್ನಲೆ ಅವರಿಗಿತ್ತು ದೇಶ ಪರ್ಯಟನ ಮಾಡುತ್ತ ಅಪಲೂರಿಗೆ ಬಂದು ಶಿವದೇವಾಲಯವಾಗಿ ಪರಿವರ್ತನೆ ಮಾಡಿ ಜನರ ಜೀವನವನ್ನು ಶ್ರೀಮಂತಗೊಳಿಸಿದವರು. ಪರಿಶ್ರಮದಿಂದ ಶಿವಯೋಗ ಧ್ಯಾನ ಎಂದು ನಂಬಿದವರು ಅವರ ತತ್ವ ಸಿದ್ಧಾಂತ ಇಂದು ನಾವೆಲ್ಲ ಒಂದಾಗಿ ಅನುಸರಿಸಿ ಬಾಳಬೇಕು ಮುನ್ನಡೆಯಬೇಕು ಎಂದರು.

ನಿರ್ದೇಶಕಿ ಜ್ಯೋತಿ ಬಾಗಲಕೋಟ ಅತಿಥಿಗಳಾಗಿದ್ದರು. ಅಪ್ಪಾಸಾಹೇಬ ಕೋರಿ ವಚನಗೀತೆ ಪ್ರಸ್ತುತ ಪಡಿಸಿದರು. ಪ್ರಧಾನ ಕಾರ್ಯದರ್ಶಿ ಬಿ.ಟಿ. ಈಶ್ವರಗೊಂಡ ಸ್ವಾಗತಿಸಿದರು. ಉಪಾಧ್ಯಕ್ಷ ಸಹದೇವ ನಾಡಗೌಡರ ವಂದಿಸಿದರು. ಸಾಹಿತಿ ಸಂಗಮೇಶ ಬದಾಮಿ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಡಾ. ವಿ.ಡಿ. ಐಹೊಳ್ಳಿ, ಕಾಶಿನಾಥ ಅಣೆಪ್ಪನವರ, ವಿಶ್ರಾಂತ ಎ.ಎಸ್.ಐ. ಪಟ್ಟಣಶೆಟ್ಟಿ, ಎಸ್.ಎನ್. ಶಿವಣಗಿ, ಸುಭಾಸ ಬೆಟಗೇರಿ, ಮಲ್ಲಿಕಾರ್ಜುನ ಅಮರಣ್ಣವರ, ಮಹಾದೇವ ಹಾಲಳ್ಳಿ, ಜಗದೀಶ ಮೋಟಗಿ ಶರಣರು, ಶರಣೆಯರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಬಿಎಲ್ ಡಿಇ ಆಸ್ಪತ್ರೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆ

**ಬೆಳಗಾವಿ ವಾರ್ತೆ ವಿಜಯಪುರ:** ವಿಶ್ವಮಟ್ಟದ ವೈದ್ಯಕೀ ಯ ಸೇವೆಗಳನ್ನು ಉತ್ತರ ಕರ್ನಾಟಕ ಭಾಗದ ಜನತೆಗೆ ಒದಗಿಸುವ ಉದ್ದೇಶದಿ ಂದ ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಅತ್ಯಾಧು ನಿಕ ತಂತ್ರಜ್ಞಾನಗಳನ್ನು ಆಸ್ಪತ್ರೆಗೆ ಅಳವಡಿಸಲಾಗುತ್ತಿದೆ. ಈ ಹೊಸ 3ಆ ಮತ್ತು 4ಏ ಅನುಕೂಲ ಹೊಂದಿದ ವ್ಯವಸ್ಥೆಗಳು ವೈದ್ಯಕೀಯ ಶಿಕ್ಷಣ, ಸಂಶೋಧನೆ ಮತ್ತು ರೋಗಿ ಸೇವೆಯಲ್ಲಿ ಮಹತ್ತರ ಬದಲಾವಣೆ ತರಲಿವೆ ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಶುಕ್ರವಾರ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದಲ್ಲಿ ನೂತನವಾಗಿ ಅಳವಡಿಸಲಾಗಿರುವ ಅತ್ಯಾಧುನಿಕ ಲ್ಯಾಪೊಸ್ಕೋಪಿ ಮತ್ತು ಆರ್ಥ್ರೊಸ್ಕೋಪಿ ಯಂತ್ರಗಳನ್ನು ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಮತ್ತು ವೈದ್ಯಕೀಯ ತಜ್ಞರು, ಈ ತಂತ್ರಜ್ಞಾನದಿಂದ ರೋಗಿಗಳಿಗೆ ಇನ್ನಷ್ಟು ಗುಣಮಟ್ಟದ ಚಿಕಿತ್ಸೆ ಲಭ್ಯವಾಗಲಿದ್ದು, ಆಸ್ಪತ್ರೆಯ ಶಸ್ತ್ರಚಿಕಿತ್ಸೆ ಸೇವೆಗಳು ಮತ್ತಷ್ಟು ಬಲವಾಗಲಿವೆ ಎಂದು ಹೇಳಿದರು. ಈಗ ರಂಧ್ರಗಳ ಮೂಲಕ ಶಸ್ತ್ರಚಿಕಿತ್ಸೆ ನಡೆಸುವ ಎರಡು ಸೌಲಭ್ಯಗಳನ್ನು ಒದಗಿಸುವ ಮೂಲಕ ಮತ್ತೊಂದು ಮಹತ್ವದ ಆರೋಗ್ಯ ಸೇವೆ ಸೌಲಭ್ಯ ರೋಗಿಗಳಿಗೆ ಸಿಗಲಿದೆ ಎಂದು ಅವರು ಹೇಳಿದರು.

ಜನರಲ್ ಸರ್ಜರಿ ವಿಭಾಗಕ್ಕೆ ಅತ್ಯಾಧುನಿಕ ಕಾರ್ಲಸ್ಟೋರ್ಜ್ ರುಬಿನಾ ಲ್ಯಾಪ್ರೊಸ್ಕೊಪಿ ಸೆಟ್(‘Karl Storz Rubina Laparoscopy Set) ಗಾಲ್ ಬ್ಲಾಡರ್ ಚಿಕಿತ್ಸೆ, ಅಪೆಂಡಿಕ್ಸ್, ಹರ್ನಿಯಾ ಸೇರಿದಂತೆ ನಾನಾ ಜಟಿಲ ಶಸ್ತ್ರಚಿಕಿತ್ಸೆಗಳ ನ್ನು ಹೆಚ್ಚು ನಿಖರವಾಗಿ ನಡೆಸಲು ಅನುಕೂಲವಾಗಿದೆ. ಅಲ್ಲದೇ, ಆರ್ಥೊ ಸ್ಕೋಪಿಕ್ ಆಪರೇಶನಗಳಿಗೆ ಬಳಸ ಲಾಗುವ ಮತ್ತೊಂದು ಕೀಲುದರ್ಶಕ ಯಂತ್ರ( ಸ್ಟ್ರೈಕರ್ ಆರ್ಥೊಸ್ಕೋಪಿ) ಎಲುವು ಮತ್ತು ಕೀಲು ಸಂಬಂಧಿ ಸಮಸ್ಯೆಗಳನ್ನು ಎದುರಿ ಸುತ್ತಿರುವ ರೋಗಿಗಳಿಗೆ ವರದಾನವಾಗ ಲಿದೆದ. ಈ ತಂತ್ರತ್ರಜ್ಞಾನ ಬಳಕೆಯಿಂದ ರೋಗಿಗಳಿಗೆ ಕಡಿಮೆ ನೋವು, ಕಡಿಮೆ ರಕ್ತಸ್ರಾವ ಹಾಗೂ



ವೇಗವಾದ ಚೇತರಿಕೆ ಸಾಧ್ಯವಾ ಗಲಿದೆ. ಗ್ರಾಮೀಣ ಹಾಗೂ ಬಡ ಜನರಿಗೆ ಅತ್ಯುತ್ತಮ ಆರೋಗ್ಯ ಸೇವೆ ತಲುಪಿಸಬೇಕು ಎನ್ನುವ ನಮ್ಮ ಸಂಕಲ್ಪಕ್ಕೆ ಇದು ಮತ್ತೊಂದು ಬಲವಾದ ಹೆಜ್ಜೆ ಯಾಗಿದೆ ಎಂದು ಸಚಿವರು ಹೇಳಿದರು.

ಈ ಸಂದರ್ಭದಲ್ಲಿ ಡೀಮ್ಡ್ ವಿವಿ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಕುಲಪತಿ ಡಾ. ಅರುಣ ಚಂ. ಇನಾಮದಾರ, ಕುಲಸಚಿವ ಡಾ. ಆರ್. ವಿ. ಕುಲಕರ್ಣಿ, ಕಾಲೇಜಿನ ಪ್ರಾಚಾರ್ಯೆ ಡಾ. ತೇಜಶ್ವಿನಿ ವಲ್ಲಭ, ಹಿರಿಯ ಉಪ ಪ್ರಚಾರ್ಯ ಮತ್ತು ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕ ಡಾ. ವಿಜಯಕುಮಾರ ಟಿ. ಕಲ್ಯಾಣಪ್ಪಗೋಳ, ಉಪಪ್ರಾಚಾರ್ಯ ಡಾ. ಆನಂದ ಅಂಬಲಿ, ವೈದ್ಯಕೀಯ ಅಧೀಕ್ಷಕ ಡಾ. ಎಸ್. ಎನ್. ಬೆಂಟೂರ್ ಸೇರಿದಂತೆ ವಿಶ್ವವಿದ್ಯಾಲಯದ ಅಧಿಕಾರಿಗಳು, ವಿಭಾಗದ ಮುಖ್ಯಸ್ಥರು ಹಾಗೂ ಅಧ್ಯಾಪಕರು ಉಪಸ್ಥಿತರಿದ್ದರು.

# ನರೇಗಾ ಕಾಮಗಾರಿ ಸ್ಥಳಕ್ಕೆ ಪ್ರಕಾಶ ವಡ್ಡರ ಭೇಟಿ



**ಬೆಳಗಾವಿ ವಾರ್ತೆ ವಿಜಯಪುರ:** ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಗ್ರಾಮ ಪಂಚಾ ಯತಿ ವ್ಯಾಪ್ತಿಯ ಅರಳದಿನ್ನಿ ಗ್ರಾಮದ ಸಮೀಪ ಬಸಿಗಾಲುವೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ್ ಅವರು ಭೇಟಿ ನೀಡಿ ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ಕೆಲಸ ಮಾಡುತ್ತಿದ್ದ ಕೂಲಿ ಕಾರ್ಮಿಕರ ಮಸ್ಟರ್ ರೂಲ್ ಹಾಗೂ ಫೋಟೊ ಆಧಾರಿತ ಹಾಜರಾತಿ ಪರಿಶೀಲಿಸಿದರು.

ಕೂಲಿಕಾರರೊಂದಿಗೆ ಸಂವಾದ ನಡೆಸಿದ ಅವರು, ಈ ಯೋಜನೆಯಡಿ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಹೂಳೆತ್ತುವ ಕಾಯಕದಲ್ಲಿ ಮಗ್ನರಾಗಿದ್ದ ಕೂಲಿಕಾರರು ತಮ್ಮ ಕೆಲಸದ ನಡುವೆಯೇ ಕೇಕ್ ಕತ್ತರಿಸಿ ಕಾರ್ಮಿಕ ದಿನವನ್ನು ಸಂಭ್ರಮದಿಂದ ಆಚರಿಸಿದರು.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ಬಗ್ಗೆ ಪಿಡಿಒ ಹಾಗೂ ತಾಂತ್ರಿಕ ಇಂಜಿನಿಯರ್ ಗಳಿಂದ ಮಾಹಿತಿ ಪಡೆದ ಅವರು, ಬದು ನಿರ್ಮಾಣ, ಕೃಷಿ ಹೊಂಡಗಳಂಥ ವೈಯಕ್ತಿಕ ಕಾಮಗಾರಿಗಳ ಜತೆಗೆ ಸಾಮೂಹಿಕ ಕಾಮಗಾರಿಗಳಿಗೆ ಆದ್ಯತೆ ನೀಡುವಂತೆ ತಿಳಿಸಿದರು.

ಬಳಿಕ ಮಾತನಾಡಿದ ಅವರು, ಕೂಲಿಕಾರರ ಹಾಜರಾತಿಯನ್ನು ಎನ್.ಎಂ.ಎಂ.ಎಸ್ ಆಪ್ ಮುಖಾಂತರವೇ ಎರಡು ಬಾರಿ ಕಡ್ಡಾಯವಾಗಿ ತೆಗೆದುಕೊಳ್ಳಬೇಕು. ಬಿಸಿಲಿನ ತಾಪಮಾನ ಹೆಚ್ಚುತ್ತಿರುವುದರಿಂದ ಕೆಲಸಕ್ಕೆ ಬೇಗನೆ ಬರಬೇಕು. ನಿಮಗೆ ನೀಡಿರುವ ಅಳತೆ ಪ್ರಕಾರ ಕೆಲಸ ಮಾಡಬೇಕು ಎಂದು ಕೂಲಿಕಾರರಿಗೆ ಸೂಚಿಸಿದರು.

ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಾಕಷ್ಟು ಕೂಲಿಕಾರರು ಕೆಲಸಕ್ಕೆ ಬರುವವರಿಗೆ ಎನ್.ಎಂ.ಎಂ.ಎಸ್ ಆಪ್ ತೆಗೆದು ಉದ್ಯೋಗ ನೀಡುವಂತೆ ಪಿಡಿಒ ಅವರಿಗೆ ಸೂಚಿಸಿದರು.

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನಿರಂತರವಾಗಿ ಕೆಲಸ ಒದಗಿಸಲಾಗುತ್ತಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕೂಲಿ ಕಾರ್ಮಿಕರಿಗೆ ತಿಳಿಸಿದರು.

ಈ ವೇಳೆ ಜಿಲ್ಲಾ ಪಂಚಾಯತಿ ಯೋಜನಾಧಿಕಾರಿ ಅರುಣಕುಮಾರ್ ದಳವಾಯಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ, ಪಿಡಿಒ ಜಿ.ಬಿ.ಕಲ್ಯಾಣಿ, ಕಾರ್ಯದರ್ಶಿ ರಮೇಶ ಉಪ್ಪನಸಿ, ತಾಲೂಕು ಐಇಸಿ ಸಂಯೋಜಕ ದಸ್ತಗೀರ ಗುಡಿಹಾಳ, ತಾಂತ್ರಿಕ ಸಹಾಯಕರಾದ ದಿಗಂಬರೇಶ ಪಾಟೀಲ, ಮಲಕಪ್ಪ ಕೊಳಮಲಿ, ಬಿಎಫ್ ಟಿ ವಿಠ್ಠಲ ಹರಳಯ್ಯ, ಬಿಲ್ ಕಲೆಕ್ಟರ್ ತಿಮ್ಮಣ್ಣ ವಡ್ಡರ್, ಡಿಇಒ ಜೈನಾಬಿ ಲಷ್ಕರಿ ಹಾಗೂ ಕೂಲಿಕಾರರು ಹಾಜರಿದ್ದರು.

## ಬದ್ಧತೆಯಿಂದ ಕೆಲಸ ಮಾಡಿ ಸಕಾಲಕ್ಕೆ ಪ್ರಗತಿ ಸಾಧಿಸಿ: ಜಿಪಂ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಸೂಚನೆ



**ಬೆಳಗಾವಿ ವಾರ್ತೆ ವಿಜಯಪುರ:** ಯೋಜನೆಗಳಿಗೆ ಪೂರಕವಾಗಿ ಸಕಾಲಕ್ಕೆ ಕೆಲಸ ಮಾಡಿದರೆ ಯಾವುದೇ ಸಮಸ್ಯೆಗಳು ಬರುವುದಿಲ್ಲ. ಹಾಗಾಗಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮನ್ವಯ ಸಾಧಿಸಿ ಕೆಲಸ ಮಾಡಿದರೆ ಎಲ್ಲ ಅಂಶಗಳಲ್ಲೂ ಪ್ರಗತಿ ಹೊಂದಲು ಸಾಧ್ಯ ಎಂದು ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಹೇಳಿದರು.

ಜಿಲ್ಲೆಯ ಮುದ್ದೇಬಿಹಾಳ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಮುದ್ದೇಬಿಹಾಳ ಹಾಗೂ ತಾಳಿಕೋಟೆ ತಾಲೂಕುಗಳ ಮಹಾತ್ಮ ಗಾಂಧಿ ನರೇಗಾ ಯೋಜನೆ, ಗ್ರಾಮ ಪಂಚಾಯತಿ ತೆರಿಗೆ, ಗ್ರಂಥಾಲಯ, ತೆರಿಗೆ ವಸೂಲಾತಿ, ವಸತಿ, ಎಸ್.ಬಿ.ಎಮ್. ಅನುದಾನ ಪಾವತಿ, ಇ-ಹಾಜರಾತಿ, ಮಹಿಳಾ ಗ್ರಾಮ ಸಭೆ, ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಸಮಯಕ್ಕೆ ಸರಿಯಾಗಿ ಕಚೇರಿಗಳಿಗೆ ತೆರಳಿ, ಪ್ರಾಮಾಣಿಕವಾಗಿ ಕೆಲಸ ಮಾಡಿ ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಲಹೆ ನೀಡಿದರು.

ಎರಡು ತಾಲೂಕಿಗೆ ನಿಗದಿಪಡಿಸಿರುವ ಮಾನವ ದಿನಗಳನ್ನು ಮೇ ತಿಂಗಳ ಅಂತ್ಯದಲ್ಲಿ ಪೂರ್ಣಗೊಳಿಸಬೇಕು. ಪ್ರಸ್ತುತ ಹಾಗೂ ಬಾಕಿ ಉಳಿದ ನರೇಗಾ ಕೂಲಿಕಾರರ ಕೂಲಿಯನ್ನು ಸಕಾಲದಲ್ಲಿ ಪಾವತಿಸಬೇಕು. ಎಲ್ಲಾ ನರೇಗಾ ಕೂಲಿಕಾರರ ಇಕೆವೈಸಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು ಎಂದರು.

ನರೇಗಾ ಯೋಜನೆಯಡಿ ಅಪೂರ್ಣಗೊಂಡ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಬೇಕು. ನಮೂನೆ-6 ರಲ್ಲಿ ಬೇಡಿಕೆ ಸಲ್ಲಿಸಿದ ಎಲ್ಲಾ ಕೂಲಿಕಾರರಿಗೆ ಉದ್ಯೋಗ ಒದಗಿಸಬೇಕು. ವಿವಿಧ ಯೋಜನೆಗಳಲ್ಲಿ ನಿಗದಿತ ಪ್ರಗತಿ ಕುಂಠಿತಗೊಂಡಿರುವುದನ್ನು ಉಲ್ಲೇಖಿಸಿ ತ್ವರಿತವಾಗಿ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಪಂ ಸಹಾಯಕ ಯೋಜನಾಧಿಕಾರಿ ಅರುಣಕುಮಾರ ದಳವಾಯಿ, ಮುದ್ದೇಬಿಹಾಳ ತಾಪಂ ಇಒ ಸಂಗನಗೌಡ ತಾಳಿಕೋಟಿ, ತಾಪಂ ಇಒ ಅನುಸೂಯ ಚಲವಾದಿ ವೇದಿಕೆಯಲ್ಲಿದ್ದರು.

ಸಭೆಯಲ್ಲಿ ಸಹಾಯಕ ನಿರ್ದೇಶಕರು (ಗ್ರಾ.ಪಂ.) ಎಸ್.ಎಸ್.ಗಣಾಚಾರ್ಯ, ಪಿ.ಎಸ್. ಕಸನಕ್ಕಿ, ಸಹಾಯಕ ನಿರ್ದೇಶಕ (ಪಂ.ರಾ) ಮಲ್ಲಿಕಾರ್ಜುನ ಕೋರಿ, ಸಹಾಯಕ ಲೆಕ್ಕಾಧಿಕಾರಿ ವೀರೇಶ ಹೂಗಾರ, ಮುದ್ದೇಬಿಹಾಳ ಹಾಗೂ ತಾಳಿಕೋಟೆ ತಾಲೂಕಿನ ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಎಲ್ಲಾ ತಾಂತ್ರಿಕ ಸಹಾಯಕರು, ಬೇರ್ ಫೂಟ್ ಟೆಕ್ನಿಶಿಯನ್ಸ್, ಗ್ರಾಮ ಕಾಯಕ ಮಿತ್ರರು, ತಾಲೂಕ ಪಂಚಾಯತ ನರೇಗಾ ಸಿಬ್ಬಂದಿ ಉಪಸ್ಥಿತರಿದ್ದರು.

# ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ) ಜರುಗಿದ ವಿಶ್ವ ಭೂ ದಿನಾಚರಣೆ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಧಾರವಾಡ:** ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ) ಯಲ್ಲಿ ನಿನ್ನೆ (ಮೆ.6) ವಿಶ್ವ ಭೂ ದಿನಾಚರಣೆಯನ್ನು ಆಚರಿಸಲಾಯಿತು.

ವಿಧಾನ ಪರಿಷತ್ತು ಶಾಸಕರಾದ ಎಫ್. ಹೆಚ್. ಜಕ್ಕಪ್ಪನವರ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡುತ್ತಾ, ವಾಲ್ಮಿ ಸಂಸ್ಥೆಯ ಆವರಣವು ಸುಸಜ್ಜಿತವಾಗಿದ್ದು, ಇಂತಹ ಉಪಯುಕ್ತ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಸಂತಸದ ವಿಚಾರ. ದೆಹಲಿಯ ವಾಟರ್ ಬೋರ್ಡ್‌ನಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರನ್ನು ಭಾರತದ ಪ್ರಥಮ ನೀರಾವರಿ ತಜ್ಞ ಎಂದು ಉಲ್ಲೇಖಿಸಿರುವುದನ್ನು ಅವರು ಸ್ಮರಿಸಿದರು.

ನೀರಿನ ಉಳಿತಾಯ, ಸದ್ಬಳಕೆ ಹಾಗೂ ನೀರಿನ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ನೀರು ಮಾಲಿನ್ಯ ನಿಯಂತ್ರಣ ಕಾಯ್ದೆ 1974 ಅನ್ನು ಪಾಲಿಸಬೇಕು. ಕಿತ್ತೂರು ಹಾಗೂ ಕಲ್ಯಾಣ ಕರ್ನಾಟಕ ಭಾಗಗಳ ರೈತರೂ ಹೈನುಗಾರಿಕೆಯಲ್ಲಿ ತೊಡಗಿಸಿಕೊಳ್ಳಬೇಕು. ಜಾನುವಾರುಗಳ ಖರೀದಿಗೆ ಸರ್ಕಾರದಿಂದ ಶೇ.25 ರಷ್ಟು ಸಹಾಯಧನ ರಿಯಾಯಿತಿ ದೊರೆಯುತ್ತಿರುವುದನ್ನೂ ತಿಳಿಸಿದರು.

ನೈಸರ್ಗಿಕ ಸಂಪನ್ಮೂಲಗಳಾದ ಮಣ್ಣು ಮತ್ತು ನೀರಿನ ಸಂರಕ್ಷಣೆ, ಸದ್ಬಳಕೆ ಹಾಗೂ ಅಭಿವೃದ್ಧಿಗೆ ಪೂರಕವಾಗುವ ಆಧುನಿಕ ಕೃಷಿ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ರೈತರಿಗೆ ಅರಿವು ಮೂಡಿಸಿದರೆ, ಲಾಭದಾಯಕ ಕೃಷಿ ನಡೆಸುವುದರ ಜೊತೆಗೆ ಮಣ್ಣಿನ ಗುಣಮಟ್ಟವನ್ನು ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ, ಈ ನಿಟ್ಟಿನಲ್ಲಿ ವಾಲ್ಮಿ ಸಂಸ್ಥೆಯು ರೈತರಿಗೆ ನಿರಂತರವಾಗಿ ತರಬೇತಿಗಳನ್ನು ನೀಡುತ್ತಿದ್ದು, ರೈತರು ಇದರ ಸದುಪಯೋಗ ಪಡೆಯಬೇಕೆಂದು



ಮನವಿ ಮಾಡಿದರು. ಮುಂದಿನ ದಿನಗಳಲ್ಲಿ ವಾಲ್ಮಿ ಸಂಸ್ಥೆಯು ಮಣ್ಣು ಮತ್ತು ನೀರಿನ ಸದ್ಬಳಕೆ ಹಾಗೂ ರೈತರಿಗೆ ಅನುಕೂಲಕರ ಹೊಸ ಯೋಜನೆಗಳನ್ನು ರೂಪಿಸಿ ಸರ್ಕಾರಕ್ಕೆ ಸಲ್ಲಿಸಿದಲ್ಲಿ, ಅವುಗಳಿಗೆ ಅನುದಾನ ಬಿಡುಗಡೆ ಮಾಡಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಅತಿಥಿಗಳಾಗಿ ಆಗಮಿಸಿದ ಕೃಷಿ ವಿಶ್ವ ವಿದ್ಯಾಲಯದ ನಿವೃತ್ತ ವಿದ್ಯಾಧಿಕಾರಿ ಹಾಗೂ ಮಣ್ಣು ವಿಜ್ಞಾನಿ ಡಾ. ವಿ. ಬಿ. ಕುಲಿಗೋಡ ಅವರು ಮಾತನಾಡಿ, ಅವೈಜ್ಞಾನಿಕ ಕೃಷಿ ಪದ್ಧತಿಯಿಂದ ಮಣ್ಣು ಅವನತಿಯತ್ತ ಸಾಗಿದೆ. ಕೃಷಿಗೆ ಮಣ್ಣಿನಲ್ಲಿರುವ ಪೋಷಕಾಂಶಗಳು ಸಮತೋಲನವಾಗಿರಬೇಕು. ಕೃಷಿಗೆ ಅಂತರ್ಜಲದ ಹೆಚ್ಚು ಬಳಕೆಯಾಗುತ್ತದೆ. ಬೋರ್‌ವೆಲ್ ನೀರಿನಲ್ಲಿ ಲವಣದ ಪ್ರಮಾಣದ ಹೆಚ್ಚಾಗಿದ್ದು, ನೀರು ಮತ್ತು ಮಣ್ಣಿನ ಅವೈಜ್ಞಾನಿಕ ನಿರ್ವಹಣೆಯಿಂದ ಸವಳು-ಜವಳು ಸಮಸ್ಯೆಯನ್ನು ರೈತರು ಎದುರಿಸುತ್ತಿದ್ದಾರೆ. ಕರ್ನಾಟಕದಲ್ಲಿ 80,000 ಹೆಕ್ಟೇರ್‌ಗೂ ಹೆಚ್ಚಿನ ಅಚ್ಚುಕಟ್ಟು ಪ್ರದೇಶ ಸವಳು ಜವಳಾಗಿದೆ. ಸಮಸ್ಯಾತ್ಮಕ ಮಣ್ಣಿನ ನಿರ್ವಹಣೆ ಹೆಚ್ಚಿನ ವೆಚ್ಚದಾಯಕವಾಗಿದೆ ಎಂದರು. ಮಣ್ಣು ಪರೀಕ್ಷೆ ಮತ್ತು ನೀರು ಪರೀಕ್ಷೆ ಮೂಲಕ ಮಣ್ಣಿನ ಗುಣಧರ್ಮವನ್ನು ಆಧರಿಸಿದ ಶಿಫಾರಸ್ಸು ಮಾಡಿದ ಪೋಷಕಾಂಶಗಳು ಹಾಗೂ ರಾಸಾಯನಿಕಗಳನ್ನು ಮಾತ್ರ ಪೂರೈಸಬೇಕು ಎಂದು ಅವರು ಹೇಳಿದರು.

ವಾಲ್ಮಿ ನಿರ್ದೇಶಕ ಡಾ. ಗಿರೀಶ ಎನ್. ಮರಡ್ಡಿ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ, ಮಾತನಾಡಿ, ಜನಸಂಖ್ಯೆ ಹೆಚ್ಚಾಗುತ್ತಿದ್ದು, ಕೃಷಿ ಭೂಮಿ ಕಡಿಮೆಯಾಗುತ್ತಿದೆ ಇಂಥಹ ಸಂದರ್ಭದಲ್ಲಿ ಆಹಾರ ಭದ್ರತೆ ನೀಡುವುದೂ ಕೂಡಾ ಅನಿವಾರ್ಯವಾಗಿದೆ. ಸಮೃದ್ಧ ನೈಸರ್ಗಿಕ ಸಂಪನ್ಮೂಲಗಳಾದ ಮಣ್ಣು ಮತ್ತು ನೀರಿನ ವೈಜ್ಞಾನಿಕ ನಿರ್ವಹಣೆಯಿಂದ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಬಹುದಾಗಿದೆ ಎಂದರು.

ಕೃಷಿಯಲ್ಲಿ ಅನೇಕ ಸವಾಲುಗಳಿವೆ. ಆದರೆ ಆಧುನಿಕ ತಂತ್ರಜ್ಞಾನಗಳನ್ನು ಬಳಕೆ ಮಾಡಿಕೊಂಡಾಗ ಮಾತ್ರ ಕೃಷಿ ಲಾಭದಾಯಕವಾಗಲು ಸಾಧ್ಯತೆ ಇದೆ ಎಂದರು. ಭಾರತದ ಒಟ್ಟು ಲಭ್ಯವಿರುವ ಭೌಗೋಳಿಕ ಪ್ರದೇಶ 329 ಮಿಲಿಯನ್ ಹೆಕ್ಟೇರ್, ಇದರಲ್ಲಿ ಸಾಗುವಳಿಗೆ ಲಭ್ಯವಿರುವ ಭೂಪ್ರದೇಶ ಕೇವಲ 141 ಮಿಲಿಯನ್ ಹೆಕ್ಟೇರ್ ಮಾತ್ರ. ಕೈಗಾರೀಕರಣ ಮತ್ತು ನಗರೀಕರಣದಿಂದ ಸಾಗುವಳಿ ಕ್ಷೇತ್ರ ಕಡಿಮೆಯಾಗುತ್ತಿದೆ. ಕೃಷಿಯಲ್ಲಿ ರಾಸಾಯನಿಕಗಳ ಸೂಕ್ತ ಹಾಗೂ ವೈಜ್ಞಾನಿಕ ಬಳಕೆ ಅಗತ್ಯ ಎಂದರು. ಏಕ ಬೆಳೆ ಪದ್ಧತಿ ಕಬ್ಬು, ಭತ್ತ, ಗೋವಿನಜೋಳ ಮತ್ತು ಹತ್ತಿಯಂಥಹ ಬೆಳೆಗಳನ್ನು ನಿರಂತರವಾಗಿ ಬೆಳೆಯುವುದರಿಂದ ಸಸ್ಯಗಳಿಗೆ ಅವಶ್ಯಕ ಪೋಷಕಾಂಶಗಳು ದೊರೆಯದೇ ಮಣ್ಣಿನ ಫಲವತ್ತತೆ ಕುಂಠಿತವಾಗುತ್ತದೆ. ಏಕ ಬೆಳೆ ಪದ್ಧತಿಯನ್ನು ಹೊರತು ಪಡಿಸಿ ಬೆಳೆ ಬದಲಾವಣೆಯನ್ನು ಅನುಸರಿಸುವುದರಿಂದ ಮಣ್ಣಿನ ಫಲವತ್ತತೆ ಸಾಧ್ಯ ಎಂದರು. ರೈತರು ವೈಜ್ಞಾನಿಕ ಕೃಷಿಯೊಂದಿಗೆ ಪಶು ಆಧಾರಿತ ಕೃಷಿ, ವೃಕ್ಷ ಆಧಾರಿತ ಕೃಷಿ ಮತ್ತು ಮೌಲ್ಯವರ್ಧನೆ ಆಧಾರಿತ ಕೃಷಿ ಮಾಡಬೇಕೆಂದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಪ್ರಗತಿಪರ ರೈತ ಗುರುಸಿದ್ದಪ್ಪ, ಚಾಲಕ ಬಸವರಾಜ ಮಾಟೊಳ್ಳಿ, ಪ್ರಗತಿಪರ ರೈತ ಹಾಗೂ ಉದ್ಯಮಿ ವಿಷ್ಣು ಅವರನ್ನು ಸನ್ಮಾನಿಸಲಾಯಿತು.

ನಿರ್ಮಿತಿ ಕೇಂದ್ರದ ಇಂಜಿನೀಯರ ಬೈಲಪ್ಪ, ಮತ್ತು ಪ್ರಾಧ್ಯಾಪಕ ಬಿ. ವೈ. ಬಂಡಿವಡ್ಡರ ಅವರು ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಭಾಗವಹಿಸಿದ್ದರು. ಕಲ್ಯಾಣ ಕರ್ನಾಟಕ ಭಾಗದ ಜಲ ಸಂಪನ್ಮೂಲ ಇಲಾಖೆಯ ಅಭಿಯಂತರರು, ತುಂಗಭದ್ರಾ ಯೋಜನೆಯ ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲೆಯ ರೈತರು ಮತ್ತು ವಾಲ್ಮಿ ಸಂಸ್ಥೆಯ ಅಧಿಕಾರಿ, ಸಿಬ್ಬಂದಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕ ಇಂದುಧರ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹ ಪ್ರಾಧ್ಯಾಪಕ ಪ್ರದೀಪ ದೇವರಮನಿ ಸ್ವಾಗತಿಸಿದರು, ಸಹಾಯಕ ಪ್ರಾಧ್ಯಾಪಕಿ ಸುನಂದಾ ಸಿತೋಳೆ ವಂದಿಸಿದರು ಮತ್ತು ಅನುರಾಧಾ ಮಳಗಿ ಕಾರ್ಯಕ್ರಮ ನಿರೂಪಿಸಿದರು.

## ಮಕ್ಕಳು ದೇಶದ ಆಸ್ತಿ, ಅವರನ್ನು ಪ್ರೀತಿಯಿಂದ ಬೆಳೆಸಿ: ಮೇಜರ್ ಎಸ್.ಸಿ. ಆನಂದ



**ಬೆಳಗಾವಿ ವಾರ್ತೆ ವಿಜಯಪುರ:** "ಮಕ್ಕಳನ್ನು ಕೇವಲ ಒಳ್ಳೆಯ ಶಾಲೆಗೆ ಸೇರಿಸಿದರೆ ಪಾಲಕರ ಜವಾಬ್ದಾರಿ ಮುಗಿಯುವುದಿಲ್ಲ. ಅವರ ದೈನಂದಿನ ಚಟುವಟಿಕೆಗಳನ್ನು ಗಮನಿಸಿ, ಅವರಲ್ಲಿ ನಾಗರಿಕ ಪ್ರಜ್ಞೆ ಹಾಗೂ ಸಂಸ್ಕಾರ ಬೆಳೆಸುವುದು ತಂದೆ-ತಾಯಂದಿರ ಆದ್ಯ ಕರ್ತವ್ಯವಾಗಿದೆ," ಎಂದು ಮೇಜರ್ ಎಸ್ ಸಿ ಆನಂದ ಅಭಿಪ್ರಾಯಪಟ್ಟರು. ವಿಜಯಪುರ ಜಿಲ್ಲೆಯ ಕನ್ನೂರಿನ ಶಾಂತಿ ಕುಟೀರ ಆಶ್ರಮದಲ್ಲಿ, ಶಾಂತಿ ಕುಟೀರ ಟ್ರಸ್ಟ್ ಹಾಗೂ ಶ್ರೀಶೈಲೇಶ್ವರ ವಿದ್ಯಾಕೇಂದ್ರ ಸಂಡೂರು ಮತ್ತು ಭಾರತೀಯ ಸುರಾಜ್ಯ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ ನಡೆಯುತ್ತಿರುವ ಉಚಿತ ಶೈಕ್ಷಣಿಕ ಹಾಗೂ ಆಧ್ಯಾತ್ಮಿಕ ಬೇಸಿಗೆ ಶಿಬಿರದಲ್ಲಿ ಪಾಲಕರ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ ಮಕ್ಕಳು ನಮ್ಮನ್ನು ಅನುಸರಿಸುತ್ತಾರೆ: "ಮಕ್ಕಳು ನಾವು ಹೇಳಿದ್ದನ್ನು ಕೇಳುವುದಕ್ಕಿಂತ ಹೆಚ್ಚಾಗಿ, ನಾವು ಮಾಡುವುದನ್ನು ನೋಡಿ ಕಲಿಯುತ್ತಾರೆ. ಪಾಲಕರು ಮೊದಲು ತಮ್ಮ ನಡವಳಿಕೆಯನ್ನು ಆದರ್ಶಪ್ರಾಯವಾಗಿಸಿಕೊಳ್ಳಬೇಕು.

ಮಕ್ಕಳ ಮುಂದೆ ಮೊಬೈಲ್ ಬಳಸುವುದನ್ನು ಬಿಟ್ಟು ಪುಸ್ತಕ ಹಿಡಿಯುವ ಹವ್ಯಾಸ ಬೆಳೆಸಿಕೊಳ್ಳಿ," ಬಡವ-ಶ್ರೀಮಂತ ಎಂಬ ಭೇದವಿಲ್ಲದೆ ಮಗುವಿನಲ್ಲಿ ಆತ್ಮಸ್ಥೈರ್ಯ ತುಂಬಿದರೆ ಅದು ಎಂತಹ ಕಠಿಣ ಪರಿಸ್ಥಿತಿಯಲ್ಲೂ ಬೆಳೆಯಬಲ್ಲದು. ಅಂಕಗಳಿಗಿಂತ ಮಗುವಿನ ವ್ಯಕ್ತಿತ್ವ ವಿಕಸನಕ್ಕೆ ಒತ್ತು ನೀಡಬೇಕು. 'ಗುರುಬ್ರಹ್ಮ ಗುರುವಿಷ್ಣು' ಶ್ಲೋಕವನ್ನು ವಿವರಿಸುತ್ತಾ, ತಂದೆ-ತಾಯಿಯೇ ಮೊದಲ ಗುರುಗಳಾಗಿದ್ದು, ಮನೆಯೇ ಮೊದಲ ಪಾಠಶಾಲೆಯಾಗಿದೆ. ಆಧುನಿಕ ತಂತ್ರಜ್ಞಾನದ ಜೊತೆಗೆ ನೈತಿಕ ಮೌಲ್ಯಗಳನ್ನು ಕಲಿಸುವುದು ಅಗತ್ಯವಾಗಿದೆ. ನಿಮ್ಮ ಮನೆಯಲ್ಲಿ "ಗಂಡ-ಹೆಂಡತಿಯಾಗಿ ಜಗಳವಾಡಿ, ಆದರೆ ಅಪ್ಪ-ಅಮ್ಮನಾಗಿ ಮಕ್ಕಳ ಮುಂದೆ ಕಿತ್ತಾಡಬೇಡಿ. ಕುಟುಂಬದ ಕಲಹಗಳು ಮಕ್ಕಳ ಮನಸ್ಸಿನ ಮೇಲೆ ಗಂಭೀರ ಪರಿಣಾಮ ಬೀರುತ್ತವೆ. ಧಾರಾವಾಹಿಗಳ ಪ್ರಭಾವಕ್ಕೆ ಒಳಗಾಗದೆ ಮನೆಯಲ್ಲಿ ಸೌಹಾರ್ದಯುತ ವಾತಾವರಣ ನಿರ್ಮಿಸಿ," ಎಂದು ಹೇಳುತ್ತಾ ಹಳೆಯ ಕಾಲ ಮತ್ತು ಇಂದಿನ ತಂತ್ರಜ್ಞಾನದ ಯುಗವನ್ನು ತುಲನೆ ಮಾಡಿ "ನಮ್ಮ ಕಾಲದಲ್ಲಿ ಎಲ್ಲವೂ ಚೆನ್ನಾಗಿತ್ತು ಎಂದು ಸುಳ್ಳು ಹೇಳಬೇಡಿ. ಅಂದು ವೈದ್ಯಕೀಯ ಸೌಲಭ್ಯಗಳ ಕೊರತೆಯಿತ್ತು. ಇಂದು ಭಾರತ ಹಾಲಿನ ಉತ್ಪಾದನೆಯಲ್ಲಿ ಪ್ರಥಮ, ತಂತ್ರಜ್ಞಾನ ಮತ್ತು ರಕ್ಷಣಾ ಪಡೆಯಲ್ಲಿ ಜಗತ್ತಿನ ಮುಂಚೂಣಿಯಲ್ಲಿದೆ. ದೇಶದ ಈ ಸಾಧನೆಗಳ ಬಗ್ಗೆ ಮಕ್ಕಳಿಗೆ ತಿಳಿಸಿ ಹೆಮ್ಮೆ ಮೂಡಿಸಿ," ಎಂದು ತಿಳಿಸಿದರು.

ಶ್ರೀಶೈಲೇಶ್ವರ ವಿದ್ಯಾಕೇಂದ್ರ ಸಂಡೂರು ಆಡಳಿತಾಧಿಕಾರಿ ಕುಮಾರ್ ಎಸ್ ನಾನಾವಟೆ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ರಾಮರಾಜ್ಯ ಕಲಾ ಮೇಳದ ಅಧ್ಯಕ್ಷ ಶ್ರೀಕೃಷ್ಣ ಸಂಪಗಾಂವಕರ ಅವರು ವಿಶೇಷ ಆಹ್ವಾನಿತರ ಪರಿಚಯದೊಂದಿಗೆ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಪಾಲಕರು ಅನೇಕ ಪ್ರಶ್ನೆಗಳನ್ನು ಕೇಳಿದರು,ಇದಕ್ಕೆ ಮೇಜರ್ ಸಿ ಎಸ್ ಆನಂದ ಇವರು ಸಮರ್ಪಕ ಉತ್ತರ ನೀಡಿದರು. ನಂತರ ಕೆಲವು ಪಾಲಕರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಈ ಕಾರ್ಯಕ್ರಮ ದಲ್ಲಿ ಮಾಜಿ ಸೈನಿಕ ಶಿವನಗೌಡ ಚನ್ನಪ್ಪಗೌಡ್ರು ಬಿರಾದಾರ ಮತ್ತು ಲಕ್ಷ್ಮಣ ಗಂಗಪ್ಪ ಪತ್ತಾರ ಅವರು ಮೇಜರ್ ಆನಂದ ಅವರಿಗೆ ಶಾಲು ಹೊದಿಸಿ, ಸ್ಮರಣಿಕೆ ನೀಡಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಶಿಬಿರದ ಹಳೆಯ ವಿದ್ಯಾರ್ಥಿನಿಯಾದ ಕಾವ್ಯ ಬೆಳ್ಳುಂಡಗಿ ಅವರು 2026 ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 625ಕ್ಕೆ 603 ಅಂಕಗಳನ್ನು ಪಡೆದು ಶೇ. 96.48 ಶಾಲೆಗೆ ಪ್ರಥಮ ಸ್ಥಾನವನ್ನು ಪಡೆಯುವ ಮೂಲಕ ಶಿಬಿರಕ್ಕೆ ಕೀರ್ತಿ ತಂದಿದ್ದಕ್ಕಾಗಿ, ಮೇಜರ್ ಆನಂದ ಮತ್ತು ರಾಮರಾಜ್ಯ ಕಲಾ ಮೇಳದ ಅಧ್ಯಕ್ಷ ಶ್ರೀಕೃಷ್ಣ ಸಂಪಗಾಂವಕರ ಹಾಗೂ ಶ್ರೀಶೈಲೇಶ್ವರ ವಿದ್ಯಾಕೇಂದ್ರದ ಆಡಳಿತಾಧಿಕಾರಿ ಕುಮಾರ್ ಎಸ್ ನಾನಾವಟೆ ಅವರು ಸನ್ಮಾನಿಸಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಆಶ್ರಮದ ನಿವಾಸಿಗಳಾದ ವಿದ್ಯಾ ತಾಯಿ, ಜ್ಞಾನ ಮಾಲ, ಕ್ಷಮಾಶಾಂತಿ, ಶ್ರೀನಿವಾಸ ಕುಲಕರ್ಣಿ, ಡೊಮನಾಳ ಗ್ರಾಮದ ಶಿಕ್ಷಕರಾದ ಪ್ರಕಾಶ ಪಾಟೀಲ್, ಸಂಡೂರಿನ ಶಿಕ್ಷಕ ಅಶೋಕ ಜಿ ಎಂ, ವೀರೇಂದ್ರ ಕುಮಾರ್ ಸೇರಿದಂತೆ ಇನ್ನಿತರ ಸಹ ಶಿಕ್ಷಕ/ಶಿಕ್ಷಕಿಯರು ಹಾಗೂ ನೂರಾರು ಪಾಲಕರು ಉಪಸ್ಥಿತರಿದ್ದರು.

## ಕಾಂಗ್ರೆಸ್ ಪಕ್ಷವೆಂಬುದು ಅನುಭವ ಮಂಟಪ: ಎಂಬಿಪಿ

**ಬೆಳಗಾವಿ ವಾರ್ತೆ ವಿಜಯಪುರ:** ಕಾಂಗ್ರೆಸ್ ಪಕ್ಷವೆಂಬುದು ಅನುಭವ ಮಂಟಪ. ಈ ಅನುಭವ ಮಂಟಪದಲ್ಲಿ ಎಲ್ಲ ಜಾತಿ-ಜನಾಂಗಗಳಿಗೆ ಸಮಸ್ಥಾನ. ಆ ಸಾಮಾಜಿಕ ಹಿನ್ನಲೆಯನ್ನು ಅನುಸರಿಸಿ ಬಹಳಷ್ಟು ಹಿಂದುಳಿದ ಸಮಾಜಗಳು ಇಂದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಳ್ಳುತ್ತಿದ್ದಾರೆ. ಈ ಕಾರ್ಯ ಮುಂದುವರೆದಿದ್ದು, ಮುಂ ದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜಗಳು ಕಾಂಗ್ರೆಸ್ ಪಕ್ಷದ ತೆಕ್ಕೆಗೆ ಬರಲಿವೆ ಎಂದು ಕೈಗಾರಿಕೆ, ಮೂಲಸೌ ಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಗುರುವಾರ ವಿಜಯಪುರ ನಗರದ ಗೃಹ ಕಚೇರಿಯಲ್ಲಿ ತಿಕೋಟಾ ಪಟ್ಟಣದ ತಳವಾರ ಸಮುದಾಯದ ನಾನಾ ಮುಖಂಡರನ್ನು ಕಾಂಗ್ರೆಸ್ಸಿಗೆ ಬರಮಾಡಿಕೊಂಡು ಅವರು ಮಾತನಾಡಿದರು.

ಮತಕ್ಷೇತ್ರದಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಯೋಜನೆಗಳು ಸಕಲ ಸಮುದಾಯಗಳ ಮೆಚ್ಚುಗೆಗೆ ಪಾತ್ರವಾಗಿದ್ದು, ತಿಕೋಟಾ ತಳವಾರ ಸಮುದಾಯದ ಪ್ರಮುಖ ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿರುವುದು ಇದಕ್ಕೆ ಸಾಕ್ಷಿಯಾಗಿದೆ. ಬಬಲೇಶ್ವರ ಮತಕ್ಷೇತ್ರದಲ್ಲಿ



ಇಂದು ರಾಜಕೀಯ ಚಿತ್ರಣವೇ ಬದಲಾಗಿದೆ. ನುಡಿದಂತೆ ನಡೆಯುವ ನಮ್ಮ ಗ್ಯಾರಂಟಿ ಸರಕಾರದ ಜನಪರ ಆಡಳಿತಕ್ಕೆ ಮನಸೋತು, ಬಿಜೆಪಿಯ ಪ್ರಮುಖರು, ಕಾರ್ಯಕರ್ತರು ತಮ್ಮ ಪಕ್ಷಕ್ಕೆ ಗುಡ್ ಬೈ ಹೇಳಿ ಕಾಂಗ್ರೆಸ್ ಗೆ ಜೈ ಎಂದಿದ್ದಾರೆ. ನಮ್ಮ ಅಭಿವೃದ್ಧಿಯ ಹಾದಿ ಮತ್ತು ಗಟ್ಟಿಯಾದ ಸಿದ್ಧಾಂತವನ್ನು ನಂಬಿ ಬಂದ ಈ ಎಲ್ಲಾ ನಾಯಕರನ್ನು ಆತ್ಮೀಯವಾಗಿ ಸ್ವಾಗತಿಸುತ್ತೇನೆ. ಅವರ ಸೇರ್ಪಡೆಯಿಂದ ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಬಲ ಬಂದಿದೆ. ಮುಂಬರುವ ದಿನಗಳಲ್ಲಿ ಅವರ ಬೇಡಿಕೆಗಳಿಗೆ ಸ್ಪಂದಿಸಲಾಗುವುದು ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಸುರೇಶ ತೊರವಿ, ಎಚ್. ಎಲ್. ತಳವಾರ, ಪರಶುರಾಮ ಕೋಳಿ, ಗಣಪತಿ ತೋರವಿ, ಅಪ್ಪಸಾಹೇಬ ಡ್ಯಾಬೇರಿ, ದಯಾನಂದ ಶಿರಹಟ್ಟಿ ಪ್ರಕಾಶ ಹಾಲಳ್ಳಿ, ಭೀಮು ಹಾಲಳ್ಳಿ, ರಮೇಶ ಗುಡದಿನ್ನಿ, ವಿಲಾಸ ಮಾಳಿ, ನಾಗಪ್ಪ ಮಾಳಿ, ಶಾಂತಾಭಾಯಿ ತಳವಾರ, ಗೀತಾ ತೋರವ, ಪುಷ್ಪಾ ತೋರವಿ, ಮಂಗಲಾ ತಳವಾರ, ಮನಿಷಾ ತಳವಾರ, ಕವಿತಾ ಹಾಲಳ್ಳಿ ಸೇರಿದಂತೆ ನೂರಾರು ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಈ ವೇಳೆ ಮುಖಂಡರಾದ ಬಿ. ಜಿ. ವಿಭೂತಿ, ಜೆ. ಎಂ. ಪಾಟೀಲ, ಮಮ್ಮು ಮುಜಾವರ, ಬಾಪು ಚೌಧರಿ, ರಾಜೂಗೌಡ ಪಾಟೀಲ, ಬಿ. ಎಲ್. ನಾಟೀಕಾರ ಮುಂತಾದವರು ಉಪಸ್ಥಿತರಿದ್ದರು.

## 9ನೇ ಟಿ-10 ಓವರ ಆರ್ಮ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಕರ್ನಾಟಕಕ್ಕೆ ದ್ವಿತೀಯ ಸ್ಥಾನ



**ಬೆಳಗಾವಿ ವಾರ್ತೆ ವಿಜಯಪುರ:** ಮೇ 4 ರಿಂದ 6ರವರೆಗೆ ಗೋವಾದ ಎಂ ಪಿ.ಟಿ ಮೈದಾನದಲ್ಲಿ ನಡೆದ 9ನೇ ಅಖಿಲ ಭಾರತೀಯ ಟಿ -10 ಓವರ್ ಆರ್ಮ ಕ್ರಿಕೆಟ್ ಕ್ರೀಡಾಕೂಟದಲ್ಲಿ ಜೂನಿಯರ್ ಬಾಲಕರ ಕರ್ನಾಟಕ ತಂಡ ದ್ವಿತೀಯ ಸ್ಥಾನ ಪಡೆದು ಜಿಲ್ಲೆಗೆ ಹಾಗೂ ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ

ಸುಶೀಲ್ ಬಿಶ್ವಕರ್ಮ( ನಾಯಕ), ಚಂದನ್ ಎಂ ನಾಯ್ಕ ( ಉಪನಾಯಕ ),ವೈಭವ ಅನಂತ್ ಶಾನಭಾಗ್, ರಾಜೇಶ್ ಮರಾಠಿ, ವಶಿಷ್ಟ ವಿ ನಾಯ್ಕ, ಪೃಥ್ವಿಶ್ ಎಸ್ ಬೇತಾಳಕರ್, ಧನುಷ್ ಆರ್ ನಾಯ್ಕ, ಪ್ರಣವ್ ಜಿ ಹರಿಕಂತ್ರ, ನಮಿತ್ ಕರ್ವಿ ಹಾಗೂ ನಾಗರಾಜ್ ಕೆ ನಾಯ್ಕ ಜಿಲ್ಲೆ, ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿ ಉತ್ತಮ ಉಗಾಡೆ, ಬಸವರಾಜ ಬಾಗೇವಾಡಿ ಉತ್ನಾಳ, ಗಿರಿಸ್ಮ ಉಗಾಡೆ ನಿರ್ಣಾಯಕರು ಮತ್ತು ತರಬೇತಿದಾರ ರಾಘವೇಂದ್ರ ಆರ್. ಅವರು ತಂಡದೊಂದಿಗೆ ಭಾಗಿಯಾಗಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001